# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 151 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 28–12–2023 ಗುರುವಾರ | ಪುಟ: 4 | ಬೆಲೆ : ರೂ.2–00
Volume - 01 Issue - 151 | Title- Code: KARKAN 28269 | Chitradurga | Date: 28-12-2023 Thursday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಮತದಾರರ ಪಟ್ಟಿ ಸಂಕ್ಷಿಪ್ತ ಪರಿಷ್ಕರಣೆ ಕಾರ್ಯಕ್ರಮದ ವೇಳಾಪಟ್ಟಿ ಪರಿಷ್ಕರಣೆ 2

ಹೊಸದುರ್ಗದಲ್ಲಿ ಉಜ್ವಲ ಸೌಲಭ್ಯ ಪಡೆಯಲು ಉಸಿರುಗಟ್ಟಿ ನಿಂತ ಜನ 3

ವಿವಿಧ ಕಲಾತಂಡಗಳೊಂದಿಗೆ ಸಾಲು ಎತ್ತಿನ ಗಾಡಿಗಳ ವೈಭವದ ಮೆರವಣಿಗೆ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಅನಿಶ್ಚಿತತೆ ಬಗ್ಗೆ ಆತಂಕ ಬೇಡ
ಏಕೆಂದರೆ ಅನಿಶ್ಚಿತ ಸನ್ನಿವೇಶದಲ್ಲೇ
ಸಾಧ್ಯತೆಗಳು ಮತ್ತು ಆಯ್ಕೆಗಳು
ಹೆಚ್ಚಾಗಿರುತ್ತವೆ

» ಶುಭೋದಯ

# ಬೀರಾವರ ಶಾಲೆ ಬಿಸಿಯೂಟ ಸೇವಿಸಿ 38 ಮಕ್ಕಳು ಅಸ್ವಸ್ಥ, ಜಿಲ್ಲಾ ಆಸ್ಪತ್ರೆಗೆ ದಾಖಲು





» ಚಿತ್ರದುರ್ಗ

ಬೀರಾವರ ಗ್ರಾಮದ ಸರ್ಕಾರಿ ಶಾಲೆಯ ಮಕ್ಕಳು ಬಿಸಿಯೂಟ ಸೇವಿಸಿದ ಸ್ವಲ್ಪ ಸಮಯದ ಬಳಿಕ ವಾಂತಿ ಭೇದಿ ಉಂಟಾಗಿ ಪರಿಣಾಮವಾಗಿ 38 ಮಕ್ಕಳು ಚಿತ್ರದುರ್ಗ ಜಿಲ್ಲಾಸ್ಪತ್ರೆಗೆ ದಾಖಲು ಮಾಡಿರುವ ಘಟನೆ ನಡೆದಿದೆ.

ಬುಧವಾರ ಮದ್ಯಾಹ್ನ ಬಿಸಿಯೂಟ ಸೇವಿಸಿ ಮನೆಗೆ ತೆರಳಿದ ಮೂರ್ನಾಲ್ಕು ಮಕ್ಕಳಿಗೆ ವಾಂತಿಭೇದಿ ಆದ ಪರಿಣಾಮವಾಗಿ ಅಸ್ವಸ್ಥಗೊಂಡ ಘಟನೆ ನಡೆದಿದೆ. ಬಳಿಕ ಇನ್ನುಳಿದ ಕೆಲ ಮಕ್ಕಳ ಆರೋಗ್ಯದಲ್ಲಿ ಏಳುಪೇರು ಕಂಡು ಬಂದ ಕಾರಣ ಮೂರು ಆಂಬ್ಯುಲೆನ್ಸ್ ನಲ್ಲಿ 38 ಮಕ್ಕಳನ್ನು ಸಹ ತಪಾಸಣೆಗಾಗಿ ಜಿಲ್ಲಾಸ್ಪತ್ರೆಗೆ ದಾಖಲು ಮಾಡಿ ಚಿಕಿತ್ಸೆ ನೀಡಲಾಗುತ್ತಿದೆ.ಮಕ್ಕಳನ್ನು ಪರೀಕ್ಷಿಸಿದ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ರವೀಂದ್ರ ಅವರು ನ್ಯೂಸ್ 19 ಕನ್ನಡ ಜೊತೆ ಮಾತನಾಡಿ 'ಆಸ್ಪತ್ರೆಗೆ ದಾಖಲಾಗಿರುವ ಎಲ್ಲಾ 38 ಮಕ್ಕಳು ಚೇತರಿಸಿಕೊಂಡಿದ್ದು ಆರೋಗ್ಯ ಸ್ಥಿರವಾಗಿದೆ. ಆಹಾರ ಸೇವನೆಯಿಂದ ವ್ಯತ್ಯಾಸವಾದ ಕಾರಣದಿಂದ ತೊಂದರೆ ಉಂಟಾಗಿರುವ ಸಾಧ್ಯತೆ ಇದೆ. ಪೋಷಕರು ಯಾರು ಸಹ ಆತಂಕಪಡುವ ಅಗತ್ಯವಿಲ್ಲ. ಪ್ರತ್ಯೇಕ ವಾರ್ಡ್‌ನಲ್ಲಿ ವೈದ್ಯರು ಚಿಕಿತ್ಸೆ ನೀಡುತ್ತಿದ್ದಾರೆ' ಎಂದರು.ಜಿಲ್ಲಾ ಆಸ್ಪತ್ರೆಗೆ ಆಗಮಿಸಿದ ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕ ರವಿಶಂಕರ್ ರೆಡ್ಡಿ ಭೇಟಿ ನೀಡಿ ಮಕ್ಕಳ ಆರೋಗ್ಯ ವಿಚಾರಿಸಿ ಪೋಷಕರಿಗೆ ಧೈರ್ಯ ತುಂಬಿದರು. ಕೇಲವು ಮಕ್ಕಳಲ್ಲಿ ವ್ಯತ್ಯಾಸ ಕಂಡಿದ್ದರಿಂದ ತಪಾಸಣೆ ಮತ್ತು ಮಕ್ಕಳ ಆರೋಗ್ಯ ದೃಷ್ಟಿಯಿಂದ ಮುನ್ನೆಚ್ಚರಿಕೆ ಕ್ರಮವಾಗಿ ಎಲ್ಲಾರನ್ನು ತಪಾಸಣೆ ಮಾಡಿಸಿದ್ದು ಆರೋಗ್ಯವಾಗಿದ್ದು ಅಗತ್ಯವಾದ ಎಲ್ಲಾ ತಪಾಸಣೆ ಮಾಡಿಸಿಲಾಗಿದೆ. ಮತ್ತು ಗ್ರಾಮಸ್ಥರ ಸಹಾಯದಿಂದ ಮಕ್ಕಳನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ' ಎಂದು ಮಾಹಿತಿ ನೀಡಿದ್ದಾರೆ. ಸ್ಥಳಕ್ಕೆ ಅಕ್ಷರ ದಾಸೋಹ ಇಲಾಖೆ ಅಧಿಕಾರಿಗಳು ಭೇಟಿ ನೀಡಿದ್ದಾರೆ.

## ಕುಷ್ಠರೋಗ ಚಿಕಿತ್ಸೆ ಮೂಲಕ ಗುಣಮುಖ ಸಾಧ್ಯ

» ಚಿತ್ರದುರ್ಗ

ಕುಷ್ಠರೋಗ ಶಾಪ ಅಥವಾ ಪಾಪದಿಂದ ಬರುವ ಖಾಯಿಲೆ ಅಲ್ಲ. ಸರಿಯಾದ ಸಮಯದಲ್ಲಿ ನಿಗದಿತ ಚಿಕಿತ್ಸೆ ನೀಡುವ ಮೂಲಕ ಕುಷ್ಠರೋಗ ಗುಣಮುಖವಾಗಲು ಸಾಧ್ಯವಿದೆ. ಈ ಚಿಕಿತ್ಸೆಯನ್ನು ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ನೀಡಲಾಗುವುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಜಿ. ಪಿ.ರೇಣುಪ್ರಸಾದ್ ಹೇಳಿದರು.

ಬುಧವಾರ ನಗರದ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಕುಷ್ಠರೋಗ ಪತ್ತೆ ಅಭಿಯಾನ ಜಾಥ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಚಿತ್ರದುರ್ಗ ಜಿಲ್ಲೆಯ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಒಟ್ಟು 3,98008 ಮನೆಗಳಿವೆ. ಕುಷ್ಠರೋಗ ಪತ್ತೆಗಾಗಿ ಒಟ್ಟು 1,469 ತಂಡಗಳನ್ನು ರಚನೆ ಮಾಡಲಾಗಿದೆ. ಪ್ರತಿಯೊಂದು ತಂಡದಲ್ಲಿ ಒಬ್ಬ ಆಶಾ ಕಾರ್ಯಕರ್ತೆ ಅಥವಾ ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ, ಒಬ್ಬ ಪುರುಷ ಆರೋಗ್ಯ ಸ್ವಯಂ ಸೇವಕರು ಇರಲಿದ್ದಾರೆ. ಡಿ.27 ರಿಂದ ಜ.11 ವರೆಗೆ 14 ದಿನಗಳ ಕಾಲ ನಿಗದಿಪಡಿಸಿದ ಮನೆಗಳ ಭೇಟಿ ಮಾಡಿ




ಸಂಶಯಾಸ್ಪದ ಕುಷ್ಠರೋಗ ಲಕ್ಷಣ ಇರುವವರನ್ನು ಪತ್ತೆಹಚ್ಚಲಿದ್ದಾರೆ. ಐದು ತಂಡಗಳಿಗೆ ಒಬ್ಬ ಮೇಲ್ವಿಚಾರಣಾ ಅಧಿಕಾರಿ ಇದ್ದು ಒಟ್ಟು 293 ಮೇಲ್ವಿಚಾರಣಾ ಅಧಿಕಾರಿಗಳು ಅಭಿಯಾನದಲ್ಲಿ ಕರ್ತವ್ಯ ನಿರ್ವಹಿಸಲಿದ್ದಾರೆ. ಮನೆ ಭೇಟಿ ಮಾಡುವುದರ ಮುಖಾಂತರ ಸಂಶಯಾಸ್ಪದ ಕುಷ್ಠ ರೋಗಿಗಳನ್ನು ಪತ್ತೆಹಚ್ಚಿ ದೃಢಪಟ್ಟ ರೋಗಿಗೆ ರೋಗಲಕ್ಷಣಗಳಿಗನುಗುಣವಾಗಿ ಆರು ತಿಂಗಳಿಂದ ಒಂದು ವರ್ಷದ ಅವಧಿಯ ಒಳಗೆ ರೋಗಿಯ ಮನೆ ಬಾಗಿಲಿಗೆ ಉಚಿತ ಔಷಧಿ ಒದಗಿಸುವುದರ ಮುಖಾಂತರ ಕುಷ್ಠರೋಗ ಮುಕ್ತ ಚಿತ್ರದುರ್ಗ ಜಿಲ್ಲೆಯನ್ನಾಗಿಸಲು ಪಣತೊಟ್ಟಿದ್ದೇವೆ ಎಂದರು.

ಜಿಲ್ಲಾ ಕುಷ್ಟರೋಗ ನಿವಾರಣಾಧಿಕಾರಿ ಡಾ.ನಾಗರಾಜ್ ಮಾತನಾಡಿ ಸಮೀಕ್ಷಾ ತಂಡದವರು ಬೆಳಿಗ್ಗೆ ಎಂಟು ಗಂಟೆಯಿಂದ 11 ಗಂಟೆಯ ಒಳಗೆ ಸಾರ್ವಜನಿಕರ ಮನೆ ಭೇಟಿ ಮಾಡುವರು. ಎರಡು ವರ್ಷ ಮೇಲ್ಪಟ್ಟ ಎಲ್ಲರು ತಮ್ಮ ದೇಹದ ಮೇಲೆ ಯಾವುದೇ ಸಂಶಯಾಸ್ಪದ ಮಚ್ಚೆಗಳಿದ್ದಲ್ಲಿ ಅವರಿಗೆ ತೋರಿಸಿರಿ ಮತ್ತು ಸಹರಿಸಬೇಕು ಎಂದು ಸಾರ್ವಜನಿಕರಿಗೆ ಮನವಿ ಮಾಡಿದರು.

ಪುಟ ↘ 3

## ರೈತರ ಅವಮಾನಿಸಿದ ಶಿವಾನಂದ ಪಾಟೀಲ್‌ರನ್ನು ಸಚಿವ ಸ್ಥಾನದಿಂದ ಕೈಬಿಡಿ



» ಚಳ್ಳಕೆರೆ

ರಾಜ್ಯ ಸರ್ಕಾರ ಸಕ್ಕರೆ ಸಚಿವ ಶಿವಾನಂದಪಾಟೀಲ್ ರೈತರನ್ನು ಉದ್ದೇಶಿಸಿ ಹೇಳಿದ ಉದ್ದಟತನದ ಮಾತು ರೈತರು ಸಹಿಸಲು ಸಾಧ್ಯವಿಲ್ಲ. ಮುಖ್ಯಮಂತ್ರಿಗಳು ಅವರನ್ನು ಸಚಿವ ಸ್ಥಾನದಿಂದ ಕೈಬಿಡಬೇಕಲ್ಲದೆ, ರೈತರನ್ನು ಕ್ಷಮೆಯಾಚಿಸಬೇಕೆಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ(ಪ್ರೊ.ಬಣ) ರಾಜ್ಯ ಉಪಾಧ್ಯಕ್ಷ ರೆಡ್ಡಿಹಳ್ಳಿ ವೀರಣ್ಣ ಒತ್ತಾಯಿಸಿದರು. ಅವರು, ಬುಧವಾರ ರೈತರ ಸಂಘದ ಪ್ರತಿಭಟನೆಯಲ್ಲಿ ಪಾಲ್ಗೊಂಡು ತಹಶೀಲ್ದಾರ್ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಅರ್ಪಿಸಿದ ಸಂದರ್ಭದಲ್ಲಿ ಹೋರಾಟಗಾರರನ್ನು ಉದ್ದೇಶಿಸಿ ಮಾತನಾಡಿದರು.

ಪುಟ ↘ 3

**ಪ್ರಮುಖ ಸುದ್ದಿ**

# ಶೋಷತ ಸಮುದಾಯಗಳು ಮೈಮರೆತು ಕೂತರೆ ತೊಂದರೆ

» ಚಿತ್ರದುರ್ಗ

ಮೇಲ್ಜಾತಿಯವರು ಶೋಷಿತರ ಧ್ವನಿ ಅಡಗಿಸುವ ಕೆಲಸ ಮಾಡುತ್ತಿರುವುದರಿಂದ ಸಮಾವೇಶದ ಮೂಲಕ ದಲಿತರು, ಹಿಂದುಳಿದವರು, ಆದಿವಾಸಿ, ಅಲೆಮಾರಿಗಳು, ಅಲ್ಪಸಂಖ್ಯಾತರು ಶಕ್ತಿ ಪ್ರದರ್ಶಿಸಬೇಕಿದೆ ಎಂದು ಶೋಷಿತ ಸಮುದಾಯಗಳ ಒಕ್ಕೂಟದ ಪ್ರಧಾನ ಸಂಚಾಲಕ ರಾಮಚಂದ್ರಪ್ಪ ಕರೆ ನೀಡಿದರು.

ಮುಂದಿನ ತಿಂಗಳು 28 ರಂದು ಮಾದಾರ ಚನ್ನಯ್ಯ ಗುರುಪೀಠದ ಪಕ್ಕದ ಮೈದಾನದಲ್ಲಿ ನಡೆಯುವ ಶೋಷಿತ ಸಮುದಾಯಗಳ ಬೃಹತ್ ಜಾಗೃತಿ ಸಮಾವೇಶದ ಅಂಗವಾಗಿ ದಾವಣಗೆರೆ ರಸ್ತೆಯಲ್ಲಿರುವ ಎನ್.ಬಿ.ಟಿ.ಹಾಲ್‌ನಲ್ಲಿ ಕರ್ನಾಟಕ ಶೋಷಿತ ಸಮುದಾಯಗಳ ಮಹಾ ಒಕ್ಕೂಟದಿಂದ ಬುಧವಾರ ಕರೆಯಲಾಗಿದ್ದ ಪೂರ್ವಭಾವಿ ಸಭೆ ಉದ್ಘಾಟಿಸಿ ಮಾತನಾಡಿದರು.

ದಾವಣಗೆರೆಯಲ್ಲಿ ನಡೆದ ವೀರಶೈವ–ಲಿಂಗಾಯತರ ಮಹಾ ಅಧಿವೇಶನದಲ್ಲಿ ಕಾಂತರಾಜ್




ವರದಿಯನ್ನು ವಿರೋಧಿಸುವುದಾಗಿ ನಿರ್ಣಯ ತೆಗೆದುಕೊಳ್ಳುವ ಮೂಲಕ ನಮ್ಮ ಮೇಲೆ ಸವಾರಿ ಮಾಡುವುದಾಗಿ ಸಂದೇಶ ನೀಡಿದ್ದಾರೆ. ಸರ್ಕಾರ ಇನ್ನು ವರದಿಯನ್ನೇ ಬಿಡುಗಡೆಗೊಳಿಸಿಲ್ಲ. ವೈಜ್ಞಾನಿಕ–ಅವೈಜ್ಞಾನಿಕ ಎಂದು ಹೇಗೆ ಹೇಳಲು ಸಾಧ್ಯ. 1931 ರಲ್ಲಿ ಜಾತಿವಾರು ಸಮೀಕ್ಷೆಯಾಗಿತ್ತು. 92 ವರ್ಷಗಳ ನಂತರ ಈಗ ಮತ್ತೆ ಜಾತಿವಾರು ಜನಗಣತಿಯಾಗಿದೆ. ಲಿಂಗಾಯತರು, ಒಕ್ಕಲಿಗರು ಹಿಂದುಳಿದವರಲ್ಲ ಎಂದು ನಾಗನಗೌಡ ಆಯೋಗದ ವರದಿಯಲ್ಲಿ ತೋರಿಸಿಲ್ಲದ ಕಾರಣ ಇದನ್ನು ವಿರೋಧಿಸಿದರು. ಹಾವನೂರ್ ಆಯೋಗದ ವರದಿಯನ್ನು ತಿರಸ್ಕರಿಸಿದ್ದರು. ಆದರೆ ಹಿಂದುಳಿದ ವರ್ಗಗಳ ಹರಿಕಾರ ಅಂದಿನ ಮುಖ್ಯಮಂತ್ರಿ ಡಿ.ದೇವರಾಜ್ ಅರಸ್ ದಿಟ್ಟತನದಿಂದ ವರದಿಯನ್ನು ಜಾರಿಗೊಳಿಸಿದರು. ಶೋಷತ ಸಮುದಾಯಗಳು ಮೈಮರೆತು ಕೂತರೆ ತೊಂದರೆ ಅನುಭವಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ವಿ.ಪಿ.ಸಿಂಗ್ ದೇಶದ ಪ್ರಧಾನಿಯಾಗಿದ್ದಾಗ ಮಂಡಲ್ ಆಯೋಗದ ವರದಿಯನ್ನು ಜಾರಿಗೆ ತಂದ ಪರಿಣಾಮ ಹಿಂದುಳಿದವರಿಗೆ ಮೀಸಲಾತಿ ಸಿಕ್ಕಿತು. ಆಗ ಆರ್.ಎಸ್.ಎಸ್.ನವರು ಮಂಡಲ್ ಆಯೋಗದ ವರದಿಯನ್ನು ವಿರೋಧಿಸಿದರು. ಮೇಲ್ಜಾತಿಯವರ ದಬ್ಬಾಳಿಕೆಗೆ ಕಡಿವಾಣ ಹಾಕಬೇಕಿದೆ. ರಾಜ್ಯ ಸರ್ಕಾರ ಶೋಷಿತರ ಉದ್ದಾರ ಮಾಡಬೇಕೆಂದು ಒತ್ತಾಯಿಸುವುದಕ್ಕಾಗಿ ಮುಂದಿನ ತಿಂಗಳು ರಾಜ್ಯದ ಮುಖ್ಯಮಂತ್ರಿ ಸೇರಿ ಎಲ್ಲಾ ಮುಖಂಡರನ್ನು ಆಹ್ವಾನಿಸಲಾಗುವುದು. ಲಕ್ಷಾಂತರ ಸಂಖ್ಯೆಯಲ್ಲಿ ದಲಿತರು, ಹಿಂದುಳಿದವರು, ಅಲ್ಪಸಂಖ್ಯಾತರು, ಆದಿವಾಸಿ,ಅಲೆಮಾರಿಗಳು ಸಮಾವೇಶದಲ್ಲಿ ಭಾಗವಹಿಸಿ ಯಶಸ್ವಿಗೊಳಿಸುವಂತೆ ಮನವಿ ಮಾಡಿದರು.

ಸಾಮಾಜಿಕ ಸಂಘರ್ಷ ಸಮಿತಿ ರಾಜ್ಯಾಧ್ಯಕ್ಷ ಪ್ರೊ.ಸಿ.ಕೆ.ಮಹೇಶ್ ಮಾತನಾಡಿ ಮುಂದಿನ ತಿಂಗಳು ನಡೆಯುವ ಸಮಾವೇಶ ಸಾಂಸ್ಕೃತಿಕ ಚಳುವಳಿಯಾಗಿ ರೂಪುಗೊಂಡಾಗ ಮಾತ್ರ ಹಿಂದುಳಿದ ವರ್ಗ ಶೋಷಿತರ ಸಮುದಾಯಗಳ ಸಮಸ್ಯೆಗಳಿಗೆ ಪರಿಹಾರ ಸಿಗುತ್ತದೆ. ಇಲ್ಲದಿದ್ದರೆ ಬ್ರಾಹ್ಮಣರು, ಮನುವಾದ ಸಿದ್ಧಾಂತವುಳ್ಳವರು ನಮ್ಮನ್ನು ಆಳುತ್ತಿರುತ್ತಾರೆ. ಅನೇಕ ರೀತಿಯ ವ್ಯತಿರಿಕ್ತ ಸಮಸ್ಯೆಗಳು ನಮ್ಮ ಮುಂದಿದೆ.

ಪುಟ ↘ 3

**ಫಾಸ್ಟ್ ನ್ಯೂಸ್**

## ಡಿ.30ರಂದು ರೈತರಿಗೆ ತರಬೇತಿ: ನೊಂದಣಿಗೆ ಸೂಚನೆ

» ಚಿತ್ರದುರ್ಗ

ಹಿರಿಯೂರು ತಾಲ್ಲೂಕು ಬಬ್ಬೂರು ಫಾರಂ ನಲ್ಲಿರುವ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಜಿಲ್ಲೆಯ ರೈತರಿಗೆ "ವೈಜ್ಞಾನಿಕ ಕುರಿ ಮತ್ತು ಮೇಕೆ ಸಾಕಾಣಿಕೆ" ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮವನ್ನು ಡಿ. 30 ರಂದು ಬೆಳಗ್ಗೆ 10 ಗಂಟೆಗೆ ಹಮ್ಮಿಕೊಂಡಿದ್ದು ಆಸಕ್ತ ರೈತರು ಭಾಗವಹಿಸಬಹುದಾಗಿದೆ.ತರಬೇತಿ ಕಾರ್ಯಕ್ರಮದಲ್ಲಿ ಪಶುಸಂಗೋಪನಾ ಇಲಾಖೆಯ ಉಪ ನಿರ್ದೇಶಕ ಡಾ.ಎನ್. ಕುಮಾರ್, ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಸಹಾಯಕ ನಿರ್ದೇಶಕ ಡಾ. ಸಿ.ತಿಪ್ಪೇಸ್ವಾಮಿ, ನಿವೃತ್ತ ಸಹಾಯಕ ನಿರ್ದೇಶಕ ಡಾ. ದೊಡ್ಡಮಲ್ಲಯ್ಯ, ಹಿರಿಯೂರು ಪಶು ಆಸ್ಪತ್ರೆಯ ಮುಖ್ಯ ಪಶು ವೈದ್ಯಾಧಿಕಾರಿ ಡಾ. ನಾಗರಾಜ್ ಅವರು, ಕುರಿ ಮತ್ತು ಮೇಕೆಯಲ್ಲಿ ಉತ್ತಮ ತಳಿಗಳ ಆಯ್ಕೆ, ಕೊಟ್ಟಿಗೆ ಮತ್ತು ಮೇವಿನ ನಿರ್ವಹಣೆ ಹಾಗೂ ಅವುಗಳ ಆರೋಗ್ಯ ನಿರ್ವಹಣೆ ಬಗ್ಗೆ ವಿಶೇಷ ಉಪನ್ಯಾಸ ನೀಡುವರು. ಆಸಕ್ತ 50 ಜನ ರೈತಭಾಂದವರು ಸದರಿ ತರಬೇತಿಯಲ್ಲಿ ಭಾಗವಹಿಸಿಸಲು ರಜನೀಕಾಂತ. ಆರ್ ಸಹಾಯಕ ಕೃಷಿ ನಿರ್ದೇಶಕರು, ಜಿಲ್ಲಾ ಕೃಷಿ ತರಬೇತಿ ಕೇಂದ್ರ, ಬಬ್ಬೂರು ಫಾರಂ (8277931058), ಉಷಾರಾಣಿ ಎಂ (9980730696) ಟಿ.ಪಿ. ರಂಜಿತಾ, ಕೃಷಿ ಅಧಿಕಾರಿ (8277930959) ಮತ್ತು ಪವಿತ್ರಾ ಎಂ. ಜೆ. (9535412286) ರವರ ದೂರವಾಣಿ ಸಂಖ್ಯೆಗೆ ಕರೆ ಮಾಡಿ ನೋಂದಾಯಿಸಿ ತರಬೇತಿಯ ಸದುಪಯೋಗ ಪಡೆದುಕೊಳ್ಳಬಹುದು. ಮೊದಲು ನೋಂದಾವಣಿ ಮಾಡಿಕೊಂಡ 50 ಜನ ರೈತಭಾಂದವರಿಗೆ ಆದ್ಯತೆ ಮೇರೆಗೆ ಪರಿಗಣಿಸಲಾಗುವುದು ಎಂದು ಬಬ್ಬೂರಿನ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕ ರಜನೀಕಾಂತ ಆರ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿ.28 ರಂದು ರಾಷ್ಟ್ರೀಯ ಗ್ರಾಹಕರ ದಿನಾಚರಣೆ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಹಾರ ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಕಾನೂನು ಮಾಪನಾ ಶಾಸ್ತ್ರ ಇಲಾಖೆ ಹಾಗೂ SLEIGHTS(R), ಜಿಲ್ಲೆ ಗ್ರಾಹಕರ ಮಾಹಿತಿ ಕೇಂದ್ರ ಇವರ ಸಂಯುಕ್ತಾಶ್ರಯದಲ್ಲಿ ಡಿ.28 ರಂದು ಬೆಳಿಗ್ಗೆ 10.30 ಕ್ಕೆ ನಗರದ ತರಾಸು ರಂಗಮಂದಿರದಲ್ಲಿ ರಾಷ್ಟ್ರೀಯ ಗ್ರಾಹಕರ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗಿದೆ. ಜಿಲ್ಲಾಧಿಕಾರಿ ದಿವ್ಯಪ್ರಭು ಜಿಆರ್‌ಜೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷೆ ಹೆಚ್.ಎನ್. ಮೀನಾ ಕಾರ್ಯಕ್ರಮ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಸದಸ್ಯೆ ಬಿ.ಕೆ. ಯಶೋಧ ಭಾಗವಹಿಸುವರು. ಇ–ಕಾಮರ್ಸ್ ಮತ್ತು ಡಿಜಿಟಲ್ ವ್ಯಾಪಾರದ ಯುಗದಲ್ಲಿ ಗ್ರಾಹಕರ ರಕ್ಷಣೆ ಕುರಿತು ವಕೀಲರಾದ ಬಿ.ಕೆ.ರಹಮತ್‌ವುಲ್ಲಾ ಉಪನ್ಯಾಸ ನೀಡುವರು ಎಂದು ಆಹಾರ ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ಜಂಟಿ ನಿರ್ದೇಶಕ ಕೆ.ಪಿ.ಮಧುಸೂಧನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗ್ಯಾಸ್‌ಗೆ ಬಯೋಮೆಟ್ರಿಕ್: ಯಾವುದೇ ಗಡವು ಇಲ್ಲ

» ಚಿತ್ರದುರ್ಗ

ಗ್ಯಾಸ್ ಸಂಪರ್ಕ ಹೊಂದಿರುವವರರು ಆಧಾರ ಬಯೋಮೆಟ್ರಿಕ್ ನೀಡಲು ಯಾವುದೇ ಗಡವು ಅಥವಾ ಕೊನೆಯ ದಿನವನ್ನು ಕೇಂದ್ರ ಸರ್ಕಾರ ನೀಡಿಲ್ಲ. ಸಾರ್ವಜನಿಕರು ತಮ್ಮ ಬಿಡುವಿನ ವೇಳೆಯಲ್ಲಿ ತೆರಳಿ ಆಧಾರ ಬಯೋಮೆಟ್ರಿಕ್ ನೀಡಬಹುದಾಗಿದೆ.

## ಫಾಸ್ಟ್ ನ್ಯೂಸ್

### ಮತದಾರರ ಪಟ್ಟಿ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಕಾರ್ಯಕ್ರಮದ ವೇಳಾಪಟ್ಟಿ ಪರಿಷ್ಕರಣೆ

» ಚಿತ್ರದುರ್ಗ



ಭಾರತ ಚುನಾವಣಾ ಆಯೋಗವು ಮತದಾರರ ಪಟ್ಟಿಗಳ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಕಾರ್ಯಕ್ರಮ ಸಂಬಂಧ ಈಗಾಗಲೆ ಸಲ್ಲಿಕೆಯಾಗಿರುವ ಅರ್ಜಿಗಳನ್ನು ವಿಲೇವಾರಿ ಮಾಡುವ ಅವಧಿಯನ್ನು ಜ. 12 ರವರೆಗೂ ವಿಸ್ತರಿಸಿದೆ. ಚಿತ್ರದುರ್ಗ ಜಿಲ್ಲೆಯಲ್ಲಿ ಮತದಾರರ ಪಟ್ಟಿಯ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಕಾರ್ಯಕ್ರಮದ ಅಂಗವಾಗಿ ಮತದಾರರ ಪಟ್ಟಿಗೆ ಹೆಸರು ಸೇರ್ಪಡೆ, ತಿದ್ದುಪಡಿ, ಸ್ಥಳಾಂತರ ಮುಂತಾದವುಗಳಿಗೆ ಸಂಬಂಧಿಸಿದಂತೆ ಹಕ್ಕು ಮತ್ತು ಆಕ್ಷೇಪಣೆಗಳಿಗೆ ಸಂಬಂಧಿಸಿದಂತೆ ಡಿ. 09 ರವರೆಗೂ ಅರ್ಜಿಗಳು ಸಲ್ಲಿಕೆಯಾಗಿರುತ್ತವೆ. ಈ ರೀತಿ ಸಲ್ಲಿಕೆಯಾಗಿರುವ ಅರ್ಜಿಗಳ ಕುರಿತು ತೀರ್ಮಾನ ಕೈಗೊಂಡು ವಿಲೇವಾರಿ ಮಾಡಲು ಈ ಮೊದಲು ಡಿ. 26 ಕೊನೆಯ ದಿನವಾಗಿತ್ತು, ಅಲ್ಲದೆ ಮತದಾರರ ಪಟ್ಟಿಯ ಅಂತಿಮ ಪ್ರಕಟಣೆಯ ದಿನಾಂಕವನ್ನು ಜ. 05 ಕ್ಕೆ ನಿಗದಿಪಡಿಸಲಾಗಿತ್ತು. ಇದೀಗ ಭಾರತ ಚುನಾವಣಾ ಆಯೋಗವು ಮತದಾರರ ಪಟ್ಟಿಗೆ ಹಕ್ಕು ಮತ್ತು ಆಕ್ಷೇಪಣೆಗಳಿಗೆ ಸಂಬಂಧಿಸಿದ ಅರ್ಜಿಗಳ ಬಗ್ಗೆ ತೀರ್ಮಾನ ಕೈಗೊಳ್ಳಲು ಅವಧಿಯನ್ನು ಜ. 12 ರವರೆಗೆ ವಿಸ್ತರಿಸಿದೆ, ಅಲ್ಲದೆ ಮತದಾರರ ಅಂತಿಮ ಪಟ್ಟಿಯ ಪ್ರಕಟಣೆ ದಿನಾಂಕವನ್ನು ಜ. 22 ಕ್ಕೆ ಮರುನಿಗದಿಪಡಿಸಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕೆಲಸ ಮಾಡುವ ಸ್ಥಳಗಳಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ ತಡೆ ಕಾಯ್ದೆ-2013

» ದಾವಣಗೆರೆ

ಜಿಲ್ಲಾಢಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ದಾವಣಗೆರೆ ವತಿಯಿಂದ ಡಿ.28 ರಂದು ಮಧ್ಯಾಹ್ನ 12 ಗಂಟೆಗೆ ಕೆಲಸ ಮಾಡುವ ಸ್ಥಳಗಳಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ ತಡೆ ಕಾಯ್ದೆ-2013 ಕುರಿತು ಅರಿವು ಕಾರ್ಯಕ್ರಮವನ್ನು ಜಿಲ್ಲಾಧಿಕಾರಿಗಳ ಕಚೇರಿಯ ತುಂಗಭದ್ರ ಸಭಾಂಗಣದಲ್ಲಿ ಆಯೋಜಿಸಲಾಗಿದೆ.ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿ ಮಹಾವೀರ ಮ ಕರೆಣ್ಣವರ ಕಾರ್ಯಕ್ರಮ ಉದ್ಘಾಟಿಸುವರು. ಜಿಲ್ಲಾಧಿಕಾರಿ ಡಾ.ವೆಂಕಟೇಶ್. ಎಂ.ವಿ ಅಧ್ಯಕ್ಷತೆ ವಹಿಸುವರು.ಮುಖ್ಯ ಅತಿಥಿಗಳಾಗಿ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್.ಬಿ.ಇಟ್ನಾಳ್, ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ಪಾಲಿಕೆ ಆಯುಕ್ತೆ ರೇಣುಕಾ, ಉಪವಿಭಾಗಾಧಿಕಾರಿ ದುರ್ಗಾಶ್ರೀ, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಷಣ್ಮುಖಪ್ಪ, ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆಯ ಉಪನಿರ್ದೇಶಕ ಜಿ.ಕೊಟ್ರೇಶ್ ಭಾಗವಹಿಸುವರು.

### ಅಂತರ್ ರಾಜ್ಯ ಕಳ್ಳನ ಬಂಧನ 7 ಲಕ್ಷ ರೂ ವಶ

» ಹೊಸದುರ್ಗ

ಹಾಡು ಹಗಲೆ ಜನಸಂಧಣಿ ಪ್ರದೇಶದಲ್ಲೆ ಕಾರಿನ ಗ್ಲಾಸು ಒಡೆದು ಕಾರಿನಲ್ಲಿದ್ದ 10 ಲಕ್ಷ ರೂಗಳನ್ನ ದರೋಡೆ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಅಂತರ್ ರಾಜ್ಯ ಕಳ್ಳನೋರ್ವನನ್ನ ಹೊಸದುರ್ಗ ಪೋಲಿಸರು ಬಂಧಿಸಿ ಬಂಧಿತನಿಂದ 7.2.000.00 ರೂಗಳನ್ನು ವಶಪಡಿಸಿಕೊಂಡಿದ್ದಾರೆ. ಬಂಧಿತ ಆರೋಪಿಯನ್ನು ನಲ್ಲೂರು ಜಿಲ್ಲೆಯ ಕಾವಲಿ ತಾಲೂಕು ಬೆಂಟ್ರಗುಂಟ ಗ್ರಾಮದ ಮೀನು ವ್ಯಾಪಾರಿ ಬಾನಾಲ ಇಚ್ಛೈನ್ (41) ಎಂದು ತಿಳಿದು ಬಂದಿದ್ದು ಈತ ಕಳೆದ ದಿನಾಂಕ 22.11.2023 ರಂದು ಹೊಸದುರ್ಗ ಪಟ್ಟಣದ ಹುಳಿಯಾರು ರಸ್ತೆಯಲ್ಲಿ ಬರುವ ಬ್ಯಾಂಕ್ ಆಫ್ ಬರೋಡ ಬ್ಯಾಂಕಿನ ಮುಂಭಾಗದಲ್ಲಿ ನಿಂತಿದ್ದ ಸ್ವಿಫ್ ಕಾರಿನ ಗ್ಲಾಸ್ ಒಡೆದು ಕಾರಿನಲ್ಲಿದ್ದ ಒಟ್ಟು 10 ಲಕ್ಷ ರೂ ನಗದು ಹಣವನ್ನ ದೋಚಿಕೊಂಡು ಪರಿಯಾಗಿದ್ದ. ಆರೋಪಿಗಳು ಬ್ಯಾಂಕ್ ಹಾಗೂ ವಹಿವಾಟು ನಡೆಯುವ ಸ್ಥಳಗಳಲ್ಲಿ ನಿಗಾ ಇಟ್ಟಿದ್ದರು. ಇಬ್ಬರು ಬ್ಯಾಂಕ್ ಒಳಗೆ, ಮತ್ತಿಬ್ಬರು ಬ್ಯಾಂಕ್ ಹೊರಗೆ ಇರುತ್ತಾರೆ. ಬ್ಯಾಂಕ್ ನಿಂದ ಹೆಚ್ಚಿನ ಹಣ ತರುವವರನ್ನು ಹಿಂಬಾಲಿಸಿ ರಬ್ಬರ್ ಬ್ಯಾಂಡ್ ನ ಸಹಾಯದಿಂದ ಕಾರಿನ ಗ್ಲಾಸ್ ಒಡೆದು, ಅಲ್ಲಿದ್ದ ಹಣ ಲಪಟಾಯಿಸುವುದು ಅವರ ವೃತ್ತಿಯಾಗಿದೆ. ಆರೋಪಿಗಳು ರೈಲ್ವೆ ಸ್ಟೇಷನ್ ಸುತ್ತಮುತ್ತ ಮನೆ ಮಾಡಿಕೊಂಡು, ಅಕ್ಕಪಕ್ಕದವರಿಗೆ ಸಂಶಯ ಬಾರದಂತೆ ತಾವು ರೈಲ್ವೆ ಇಲಾಖೆ ಕೆಲಸದವರು ಎಂದು ನಂಬಿಸುತ್ತಾರೆ. ಹಾಗಾಗಿ ಸಾರ್ವಜನಿಕರು ಬ್ಯಾಂಕ್ ಗಳಲ್ಲಿ ಹಣದ ವಹಿವಾಟು ನಡೆಸುವಾಗ ಹೆಚ್ಚು ಜಾಗರೂಕತೆಯಿಂದ ಹಾಗೂ ಸುರಕ್ಷಿತವಾಗಿರಬೇಕು ಎಂದು ಚಿತ್ರದುರ್ಗ ಪೋಲಿಸ್ ಇಲಾಖೆ ಮನವಿ ಮಾಡಿದೆ. ಆರೋಪಿಗಳನ್ನು ಪತ್ತೆ ಹಚ್ಚಿದ ಹೊಸದುರ್ಗ ಪೋಲಿಸ್ ನೀರಿಕ್ಷಕ ತಿಮ್ಮಣ್ಣ ಎನ್ ಹಾಗೂ ಅವರ ತಂಡಕ್ಕೆ ಪೋಲಿಸ್ ಅಧೀಕ್ಷಕರು ಅಭಿನಂದನೆ ಸಲ್ಲಿಸಿದ್ದಾರೆ.ಈ ಬಗ್ಗೆ ಹೊಸದುರ್ಗ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು

## ರಕ್ತದಾನ ಶ್ರೇಷ್ಠ: ಕೃತಕವಾಗಿ ರಕ್ತ ಸೃಷ್ಟಿ ಸಾಧ್ಯವಿಲ್ಲ; ಡಾ.ನಾಗರಾಜ್

# ಸಿರಿಗೆರೆಯಲ್ಲಿ ರಕ್ತದಾನ, ಕಣ್ಣಿನ ತಪಾಸಣೆ ಶಿಬಿರ


» ಚಿತ್ರದುರ್ಗ

ರಕ್ತವನ್ನು ಕೃತಕವಾಗಿ ತಯಾರಿಸಲು ಸಾಧ್ಯವಿಲ್ಲ. ಅಪಘಾತ ಹಾಗೂ ತುರ್ತು ಸಂದರ್ಭ, ರಕ್ತ ಹೀನತೆಯಿಂದ ನರಳುತ್ತಿರುವ ಗರ್ಭಿಣಿ ತಾಯಂದಿರಿಗೆ ಹೆರಿಗೆ ಸಂದರ್ಭದಲ್ಲಿ ರಕ್ತದ ಅವಶ್ಯಕತೆ ಇರುತ್ತದೆ. ಇಂತಹ ಕಾರ್ಯಗಳಿಗೆ ರಕ್ತದಾನ ಮಾಡುವುದು ಶ್ರೇಷ್ಠ ಎಂದು ಜಿಲ್ಲಾ ಕುಷ್ಟರೋಗ ನಿಯಂತ್ರಣ ಅಧಿಕಾರಿ ಡಾ.ನಾಗರಾಜ್ ಹೇಳಿದರು.

ಚಿತ್ರದುರ್ಗ ತಾಲೂಕಿನ ಸಿರಿಗೆರೆ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಇತ್ತೀಚೆಗೆ, ಆರೋಗ್ಯ ಇಲಾಖೆ, ಬಸವೇಶ್ವರ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ವಾಸವಿ ರಕ್ತ ನಿಧಿ ಕೇಂದ್ರ ಆಯೋಜಿಸಿದ ರಕ್ತದಾನ ಹಾಗೂ ಕಣ್ಣಿನ ತಪಾಸಣೆ ಶಿಬಿರದಲ್ಲಿ ಅವರು ಮಾತನಾಡಿದರು.

ಅರ್ಹ ವಯಸ್ಕರು ರಕ್ತದಾನ ಮಾಡುವುದು ಒಳ್ಳೆಯದು. ಗ್ರಾಮೀಣ ಪ್ರದೇಶದ ಜನರಿಗೆ ಆರೋಗ್ಯ ಸೇವೆ ಬಲಪಡಿಸುವ ನಿಟ್ಟಿನಲ್ಲಿ ಸರ್ಕಾರದ ಕಾರ್ಯಕ್ರಮಗಳು ಯಶಸ್ವಿಯಾಗುತ್ತಿವೆ ಎಂದರು.

ತಾಲೂಕ ಆರೋಗ್ಯ ಅಧಿಕಾರಿ ಡಾಕ್ಟರ್ ಬಿ.ವಿ.ಗಿರೀಶ್ ಮಾತನಾಡಿ ರಕ್ತದಾನ ಶ್ರೇಷ್ಠದಾನ, 18 ವರ್ಷ ಮೇಲ್ಪಟ್ಟ ಆರೋಗ್ಯವಂತ ಗಂಡು ಮಕ್ಕಳು ಮೂರು ತಿಂಗಳಿಗೊಮ್ಮೆ, ಹೆಣ್ಣು ಮಕ್ಕಳು ನಾಲ್ಕು ತಿಂಗಳಿಗೊಮ್ಮೆ ರಕ್ತದಾನ ಮಾಡಬಹುದು. ಹೆಚ್‌ಐವಿ ಪಡಿತರು, ಜಾಂಡಿಸ್ ಹಾಗೂ ದೀರ್ಘಕಾಲೀನ ಕಾಯಿಲೆ ಇರುವವರು ರಕ್ತದಾನ ಮಾಡಲು ಬರುವುದಿಲ್ಲ. ನಿಯಮಿತವಾಗಿ ರಕ್ತದಾನ ಮಾಡುವುದರಿಂದ ಹೃದಯಘಾತವನ್ನು ಕೂಡ ತಪ್ಪಿಸಬಹುದು ಎಂದರು.



ಸಮುದಾಯ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ. ತಿಮ್ಮೇಗೌಡ ಮಾತನಾಡಿ, ಸತ್ತ ಮೇಲೆ ಕಣ್ಣಿನ ದಾನವನ್ನು ಮಾಡುವುದು ಒಳಿತು, ಇದರಿಂದ ಅಂದರ ಬಾಳಿಗೆ ಬೆಳಕನ್ನು ಬರುತ್ತದೆ. . ಕಣ್ಣಿನ ದಾನ ಮಾಡುವವರು ಮೊದಲು ವಿಲ್ ಪತ್ರ ಬರೆದು ಕೊಡಬೇಕು ಎಂದರು. ಕಣ್ಣಿನಲ್ಲಿ ನೀರು ಸೋರುವುದು, ಕಣ್ಣು ಮಂಜಾಗುವುದು, ಚಿಕ್ಕ ಅಕ್ಷರಗಳು ಕಾಣಿಸದಿರುವುದು ಇಂತಹ ಲಕ್ಷಣ ಉಳ್ಳವರು ಸೂಕ್ಷ್ಮ ಹಂತದಲ್ಲಿ ಕಣ್ಣಿನ ತಪಾಸಣೆ ಮಾಡಿಸುವುದರ ಮುಖಾಂತರ ಅಂದತ್ವ ಆಗದಂತೆ ತಡೆಯಬಹುದು. ಬಡವರು ವಯಸ್ಸಾದವರು ನೇತ್ರ ತಪಾಸಣಾ ಶಿಬಿರಗಳಲ್ಲಿ ಭಾಗವಹಿಸಿ ಕಣ್ಣಿನ ತಪಾಸಣೆ ಮಾಡಿಸಿಕೊಳ್ಳುವ ಮೂಲಕ ಪ್ರಯೋಜನ ಪಡೆದುಕೊಳ್ಳುವುದು ಒಳಿತು ಎಂದರು.

ಈ ಸಂದರ್ಭದಲ್ಲಿ 11 ಜನ ಅರ್ಹ ಶಿಬಿರಾರ್ಥಿಗಳು ರಕ್ತದಾನ ಮಾಡಿದರು. ಕಣ್ಣಿನ ತಪಾಸಣಾ ಶಿಬಿರದಲ್ಲಿ 57 ಜನ ತಪಾಸಣೆ ಮಾಡಲಾಯಿತು. ಕಣ್ಣಿನ ಪೊರೆ 10 ಜನರನ್ನು ಗುರುತಿಸಿ ಬಸವೇಶ್ವರ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಉಚಿತ ಶಸ್ತ್ರಚಿಕಿತ್ಸೆ ಮತ್ತು ಔಷಧೋಪಚಾರ ಶಿಫಾರಸ್ಸು ಮಾಡಲಾಯಿತು.

ವಾಸವಿ ರಕ್ತ ನಿಧಿ ಕೇಂದ್ರದ ಡಾ ಶ್ರೀನಿವಾಸ ಶೆಟ್ಟಿ, ಬಸವೇಶ್ವರ ವೈದ್ಯಕೀಯ ಮಹಾವಿದ್ಯಾಲಯದ ನೇತ್ರ ತಜ್ಞರಾದ ಡಾ ತುಳಸಿ ರಂಗನಾಥ್, ಡಾ ಪವಿತ್ರ, ಡಾ ಸಜನ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ. ಹಿರಿಯ ಫಾರ್ಮಸಿ ಅಧಿಕಾರಿ ಮೋಹನ್ ಕುಮಾರ್ ಸೇರಿದಂತೆ ಆರೋಗ್ಯ ಇಲಾಖೆಯ ಇತರೆ ಅಧಿಕಾರಿ ಸಿಬ್ಬಂದಿ, ಆಶಾ ಕಾರ್ಯಕರ್ತೆಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ವಿಕಸಿತ ಭಾರತ ಸಂಕಲ್ಪ ಯಾತ್ರೆಗೆ ಚಾಲನೆ

» ಚಳ್ಳಕೆರೆ

ಆತ್ಮನಿರ್ಭರ ಭಾರತ ಪ್ರಧಾನಮಂತ್ರಿ ಮೋದಿಯವರ ಕನಸಾಗಿದೆ. ಕಳೆದ ಸುಮಾರು ಹತ್ತು ವರ್ಷಗಳಿಂದ ರಾಷ್ಟ್ರವನ್ನು ಅಭಿವೃದ್ಧಿ ಪಥದತ್ತ ಕೊಂಡೊಯುವಲ್ಲಿ ಮೋದಿ ಯಶಸ್ವಿ ಹೆಜ್ಜೆ ಇಟ್ಟಿದ್ದಾರೆ. ನೂರಾರು ಯೋಜನೆಗಳ ಮೂಲಕ ಸಮಾಜದ ಎಲ್ಲಾ ವರ್ಗಕ್ಕೂ ಸೌಲಭ್ಯ ಕಲ್ಪಿಸಿದ್ದಾರೆ. ಮೋದಿಯವರ ಸಾಧನೆಗಳನ್ನು ಹಳ್ಳಿ, ಹಳ್ಳಿಗೂ ತಿಳಿಸಿ ಬರುವ ಲೋಕಸಭಾ ಚುನಾವಣೆಯಲ್ಲಿ ವಿಜಯಸಾಧಿಸಿ ಮತ್ತೊಮ್ಮೆ ಮೋದಿ ಈ ದೇಶದ ಪ್ರಧಾನಿಯಾಗುವ ಕನಸನ್ನು ನನಸು ಮಾಡಲು ಎಲ್ಲರೂ ಕೈಜೋಡಿಸಬೇಕೆಂದು ಬಿಜೆಪಿ ಜಿಲ್ಲಾಧ್ಯಕ್ಷ ಎ.ಮುರುಳಿ ತಿಳಿಸಿದರು.

ಸೋಮಗುದ್ದು ಮತ್ತು ರಾಮಜೋಗಿಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಮೋದಿ ಸಾಧನೆ ಕುರಿತು ಮೋದಿ ಗ್ಯಾರಂಟಿ ಪ್ರಚಾರ ವಾಹನ ಹಾಗೂ ವಿಕಸಿತ ಭಾರತ ಸಂಕಲ್ಪ ಯಾತ್ರೆ ಮತ್ತು ಡ್ರೋನ್ ಮೂಲಕ ಔಷಧ ಸಿಂಪಡಿಸುವ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಸೋಮಗುದ್ದು ಗ್ರಾಮದಲ್ಲೂ ಆರೋಗ್ಯ ತಪಾಸಣಾ ಶಿಬಿರಕ್ಕೆ ಚಾಲನೆ ನೀಡಿದರು.



ರಾಜ್ಯದಲ್ಲಿ ಕಳೆದ ಏಳು ತಿಂಗಳಿನಿಂದ ಅಧಿಕಾರ ನಡೆಸುತ್ತಿರುವ ಕಾಂಗ್ರೆಸ್ ಪಕ್ಷ ರೈತರಪಾಲಿಗೆ ದುರಾದೃಷ್ಠ ಸರ್ಕಾರವಾಗಿ ಪರಿವರ್ತನೆಯಾಗಿದೆ. ರೈತರಿಗಾಗಿ ಯಾವುದೇ ಯೋಜನೆಯನ್ನು ರೂಪಿಸಿಲ್ಲ. ಕಡೆಪಕ್ಷ ರೈತರಿಗೆ ಯಾವುದೇ ಪರಿಹಾರ ನೀಡುವಲ್ಲಿ ಸರ್ಕಾರ ಮುಂದಾಗುತ್ತಿಲ್ಲ ಬರಬಂದು ನಾಲ್ಕು ತಿಂಗಳಾದರೂ ಆಡಳಿತ ಪಕ್ಷ ಮಾತ್ರ ಬಡ ಜನರ ಮೂಗಿಗೆ ತುಪ್ಪಸವರುತ್ತಿದೆ. ಇದು ಕಾಂಗ್ರೆಸ್ ಸರ್ಕಾರದ ರೈತರ ಬಗ್ಗೆ ಇರುವ ನಿರಾಸಕ್ತಿ ತೋರಿದೆ ಎಂದರು. ಮೋದಿಯವರ ಯೋಜನೆಯಂತೆ ಗ್ರಾಮೀಣ ಭಾಗದಲ್ಲೂ ಆರೋಗ್ಯ ಶಿಬಿರ ನಡೆಸಿ ಜನರನ್ನು ಆರೋಗ್ಯವಂತರನ್ನಾಗಿ ಮಾಡುವಲ್ಲಿ ಬಿಜೆಪಿ ಯಶಸ್ವಿ ಹೆಜ್ಜೆ ಇಟ್ಟಿದೆ ಎಂದರು.ಕಾರ್ಯಕ್ರಮದಲ್ಲಿ ಜಿಲ್ಲಾ ರೈತ ಮೋರ್ಚಾ ಅಧ್ಯಕ್ಷ ವೆಂಕಟೇಶ್‌ಯಾದವ್, ಜಿಲ್ಲಾ ಉಪಾಧ್ಯಕ್ಷ ಬಾಳೆಮಂಡಿರಾಮದಾಸ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಜೆ.ಪಿ.ಜಯಪಾಲಯ್ಯ, ಬಿಜೆಪಿ ಮುಖಂಡರಾದ ಬಿ.ಎಸ್.ಶಿವಪುತ್ರಪ್ಪ, ಟಿ.ಮಂಜುನಾಥ, ದೊರೆನಾಗರಾಜು, ದಿನೇಶ್‌ರೆಡ್ಡಿ, ದೇವರಾಜರೆಡ್ಡಿ ಉಪಸ್ಥಿತರಿದ್ದರು.

# ದಾವಣಗೆರೆಯಲ್ಲಿ 7ನೇ ರಾಜ್ಯ ಮಹಿಳಾ ಸಮ್ಮೇಳನ




» ಚಿತ್ರದುರ್ಗ

ದಾವಣಗೆರೆಯಲ್ಲಿ 2024 ಜನವರಿ 6 ಮತ್ತು 7 ರಂದು ಎ.ಐ.ಎಂ.ಎಸ್.ಎಸ್. 7ನೇ ರಾಜ್ಯ ಮಹಿಳಾ ಸಮ್ಮೇಳನ ನಡೆಯಲಿದೆ ಎಂದು ಅಖಿಲ ಭಾರತ ಮಹಿಳಾ ಸಾಂಸ್ಕೃತಿಕ ಸಂಘಟನೆ (ಎ.ಐ.ಎಂ.ಎಸ್.ಎಸ್.)ನ ರಾಜ್ಯ ಜಂಟಿ ಕಾರ್ಯದರ್ಶಿ ಶ್ರೀಮತಿ ಶಾಂತ ತಿಳಿಸಿದ್ದಾರೆ.

ಚಿತ್ರದುರ್ಗದಲ್ಲಿ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು ಅಖಿಲ ಭಾರತ ಮಹಿಳಾ ಸಾಂಸ್ಕೃತಿಕ ಸಂಘಟನೆ(ಎಐಎಂಎಸ್‌ಎಸ್), ನೊಂದ ಮಹಿಳೆಯರ ಧ್ವನಿಯಾಗಿ ದೇಶದಾದ್ಯಂತ ಹೊರಾಟಗಳನ್ನು ಸಂಘಟಿಸುತ್ತಾ ಬಂದಿದೆ.

ಹೋರಾಟದ ಮುಂದುವರಿದ ಭಾಗವಾಗಿಮಹಿಳೆಯರ ಮೇಲಿನ ದೌರ್ಜನ್ಯ ತಡೆಗಟ್ಟಿ! ಮಹಿಳೆಯರಿಗೆ ಶಿಕ್ಷಣ, ಉದ್ಯೋಗ, ಆರೋಗ್ಯ ಖಚಿತಪಡಿಸಿ!! ದುಡಿಯುವ ಮಹಿಳೆಯರಿಗೆ ಕನಿಷ್ಠ ವೇತನ, ಸೇವಾ ಭದ್ರತೆ ಖಾತ್ರಿ ಪಡಿಸಿ!!! ಈ ಘೋಷ ವಾಕ್ಯಗಳೊಂದಿಗೆ ದಾವಣಗೆರೆಯಲ್ಲಿ 7ನೇ ರಾಜ್ಯ ಮಟ್ಟದ ಮಹಿಳಾ ಸಮ್ಮೇಳನಕ್ಕೆ ಸಜ್ಜಾಗುತ್ತಿದೆ ಎಂದರು. ದೇಶಕ್ಕೆ ಸ್ವಾತಂತ್ರ್ಯ ಬಂದು 76 ವರ್ಷಗಳು ಕಳೆದರೂ ಇಂದಿಗೂ ಮಹಿಳೆಯರ ಮೇಲಿನ ದೌರ್ಜನ್ಯಗಳು ಹಸುಳೆ ವೃದ್ಧೆಯೆನ್ನದೆ ಅತ್ಯಾಚಾರ, ಹೆಣ್ಣುಮಕ್ಕಳ ಬೆತ್ತಲೆ ಮೆರವಣಿಗೆ, ಮರ್ಯಾದೆಗೇಡು ಹತ್ಯೆ, ಗುಂಪು ಅತ್ಯಾಚಾರಗಳು, ಆಸಿಡ್ ದಾಳಿ, ಕೌಟುಂಬಿಕ ದೌರ್ಜನ್ಯ, ಶಿಶು ಹತ್ಯೆ... ಹೀಗೆ ಪಟ್ಟಿ ಬೆಳೆಯುತ್ತಲೇ ಹೋಗುತ್ತದೆ. ಇಂತಹ ಅಮಾನವೀಯ ದಾಳಿಗಳು ನಡೆಯಲು ಕಾರಣ ಸಾಮಾಜಿಕ ಸಾಂಸ್ಕೃತಿಕ ಕ್ಷೇತ್ರದಲ್ಲಿನ ಅಧಃಪತನ, ಪುರುಷ ಪ್ರಧಾನ ಮನೋಭಾವ, ಪ್ರಜಾತಾಂತ್ರಿಕ ಮೌಲ್ಯಗಳ ಅಭಾವ, ಹಳೆಯ ಪ್ರತಿಗಾಮಿ ಊಳಿಗಮಾನ್ಯ ಮೌಲ್ಯಗಳ ಪ್ರಭಾವ. ಇವುಗಳೊಂದಿಗೆ ಸಾಮಾಜಿಕ ಮಾಧ್ಯಮಗಳಲ್ಲಿ ಅಶ್ಲೀಲತೆ, ವಿಕೃತತೆ, ಮನರಂಜನೆಯ ಹೆಸರಿನಲ್ಲಿ ಕ್ರೌರ್ಯ, ಹಿಂಸೆಗಳುಳ್ಳ ಸಿನಿಮಾಗಳ ಪ್ರಭಾವ, ಮೊಬೈಲ್‌ಗಳಲ್ಲಿ ವ್ಯಾಪಕವಾಗಿ ಇರುವ ರೀಲ್ಸ್ ಸಮಸ್ಯೆಗಳನ್ನು ಇನ್ನೂ ಸಂಕೀರ್ಣಗೊಳಿಸುತ್ತಿವೆ. ಅಲ್ಲದೆ ಆರ್ಥಿಕ ಸಮಸ್ಯೆಗಳಾದ ಬೆಲೆ ಏರಿಕೆ, ನಿರುದ್ಯೋಗ, ಬಡತನ, ಶಿಕ್ಷಣ ಮತ್ತು ಆರೋಗ್ಯದ ಸಮಸ್ಯೆಗಳು ಪುರುಷರೊಂದಿಗೆ ಮಹಿಳೆಯರನ್ನೂ ಕಂಗೆಡಿಸುತ್ತಿವೆ. ಈ ಎಲ್ಲಾ ಸಮಸ್ಯೆಗಳ ವಿರುದ್ಧ ರಾಜ್ಯದಾದ್ಯಂತ ಎ.ಐ.ಎಂ.ಎಸ್.ಎಸ್. ಹೋರಾಟಗಳನ್ನು ಬೆಳೆಸುತ್ತಾ ಬಂದಿದೆ

# ಡಿ. 30 ರಂದು ಕುರಿ, ಮೇಕೆ ಸಾಕಣಿಕೆ ಕುರಿತು ತರಬೇತಿ

» ಚಿತ್ರದುರ್ಗ

ಬಬ್ಬೂರು ಫಾರಂ ನಲ್ಲಿರುವ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಜಿಲ್ಲೆಯ ರೈತರಿಗೆ "ವೈಜ್ಞಾನಿಕ ಕುರಿ ಮತ್ತು ಮೇಕೆ ಸಾಕಾಣಿಕೆ" ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮವನ್ನು ಡಿ. 30 ರಂದು ಬೆಳಗ್ಗೆ 10 ಗಂಟೆಗೆ ಹಮ್ಮಿಕೊಂಡಿದ್ದು ಆಸಕ್ತ ರೈತರು ಭಾಗವಹಿಸಬಹುದಾಗಿದೆ. ತರಬೇತಿ ಕಾರ್ಯಕ್ರಮದಲ್ಲಿ ಪಶುಸಂಗೋಪನಾ ಇಲಾಖೆಯ ಉಪ ನಿರ್ದೇಶಕ ಡಾ.ಎನ್. ಕುಮಾರ್, ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಸಹಾಯಕ ನಿರ್ದೇಶಕ ಡಾ. ಸಿ.ತಿಪ್ಪೇಸ್ವಾಮಿ,ಡಾ. ದೊಡ್ಡಮಲ್ಲಯ್ಯ, ಡಾ. ನಾಗರಾಜ್ ಅವರು, ಕುರಿ ಮತ್ತು ಮೇಕೆಯಲ್ಲಿ ಉತ್ತಮ ತಳಿಗಳ ಆಯ್ಕೆ, ಕೊಟ್ಟಿಗೆ ಮತ್ತು ಮೇವಿನ ನಿರ್ವಹಣೆ ಹಾಗೂ ಅವುಗಳ ಆರೋಗ್ಯ ನಿರ್ವಹಣೆ ಬಗ್ಗೆ ವಿಶೇಷ ಉಪನ್ಯಾಸ ನೀಡುವರು. ತರಬೇತಿಯಲ್ಲಿ ಭಾಗವಹಿಸಿಸಲು ರಜನೀಕಾಂತ.ಸಹಾಯಕ ಕೃಷಿ ನಿರ್ದೇಶಕರು, ಜಿಲ್ಲಾ ಕೃಷಿ ತರಬೇತಿ ಕೇಂದ್ರ, ಬಬ್ಬೂರು ಫಾರಂ (8277931058), ಉಷಾರಾಣಿ (9980730696) ರಂಜಿತಾ, ಕೃಷಿ ಅಧಿಕಾರಿ (8277930959), ಪವಿತ್ರಾ (9535412286) ರವರ ಸಂಖ್ಯೆಗೆ ಕರೆ ಮಾಡಿ ನೋಂದಾಯಿಸಿ ತರಬೇತಿಯ ಸದುಪಯೋಗ ಪಡೆದುಕೊಳ್ಳಬಹುದು.

ಮೊದಲು ನೋಂದಾವಣಿ ಮಾಡಿಕೊಂಡ 50 ಜನ ರೈತಭಾಂದವರಿಗೆ ಆದ್ಯತೆ ಮೇರೆಗೆ ಪರಿಗಣಿಸಲಾಗುವುದು ಎಂದು ಬಬ್ಬೂರಿನ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕ ರಜನೀಕಾಂತ ಆರ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಮುಖ ಸುದ್ದಿ


# ಪ್ರೀತಿ ಆರೈಕೆ ಆರೋಗ್ಯ ಸೇವೆ ಅಭಿನಂದನೀಯ: ರೇಣುಕಾಚಾರ್ಯ

» ಹೊನ್ನಾಳಿ

ದೇಶಪ್ರೇಮ, ಅಭಿವೃದ್ಧಿ, ದೂರದೃಷ್ಟಿತ್ವ, ಮುತ್ಸದ್ಧಿತನಕ್ಕೆ ಹೆಸರಾಗಿರುವ ಶ್ರೀ ಅಟಲ್ ಬಿಹಾರಿ ವಾಜಪೇಯಿ ಅವರ ಜೀವನ ಎಲ್ಲರಿಗೂ ಪ್ರೇರಣೆಯಾಗಿದೆ. ಈ ಶುಭದಿನಂದು ಅತ್ಯಂತ ಶ್ರೇಷ್ಠ ದಾಸೋಹ ಎನಿಸಿರುವ ಆರೋಗ್ಯ ಸೇವೆಯನ್ನು ಉಚಿತವಾಗಿ ನೀಡುತ್ತಿರುವ ಡಾ. ಟಿ.ಜಿ. ರವಿಕುಮಾರ್ ನೇತೃತ್ವದ ಪ್ರೀತಿ ಆರೈಕೆ ಟ್ರಸ್ಟ್ ಕಾರ್ಯ ಅಭಿನಂದನೀಯ ಎಂದು ಮಾಜಿ ಸಚಿವರಾದ ಎಂ.ಪಿ. ರೇಣುಕಾಚಾರ್ಯ ಅವರು ಶ್ಲಾಘಿಸಿದರು.

ಶ್ರೀ ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮದಿನದ ಪ್ರಯುಕ್ತ ಹೊನ್ನಾಳಿಯ ಗುರುಭವನದಲ್ಲಿ ಪ್ರೀತಿ ಆರೈಕೆ ಟ್ರಸ್ಟ್ ಆಯೋಜಿಸಿದ್ದ ಆರೋಗ್ಯ ಉಚಿತ ತಪಾಸಣೆ. ರಕ್ತದಾನ ಶಿಬಿರ ಉದ್ಘಾಟಿಸಿ ಮಾತನಾಡಿದರು.ವೃತ್ತಿಯಲ್ಲಿ ಶಸ್ತ್ರ ಚಿಕಿತ್ಸಾ ತಜ್ಞರಾಗಿರುವ ಡಾ. ರವಿಕುಮಾರ್ ಅವರು ದಾವಣಗೆರೆ ಜಿಲ್ಲೆಯಾದ್ಯಂತ ಮೌನ ಕ್ರಾಂತಿಯ ರೀತಿ ಆರೋಗ್ಯ ತಪಾಸಣೆ ಉಚಿತ ಶಿಬಿರಗಳನ್ನು ನಿರಂತರವಾಗಿ ಆಯೋಜಿಸುತ್ತಿದ್ದಾರೆ. ಪ್ರೀತಿ ಆರೈಕೆ ಟ್ರಸ್ಟ್ ಹೆಸರಿನಲ್ಲಿ ದಾವಣಗೆರೆ ಜಿಲ್ಲೆಯಾದ್ಯಂತ ಈವರೆಗೂ 43 ಶಿಬಿರಗಳನ್ನು ಆಯೋಜಿಸಿ, ಯಶಸ್ಸಿಆಗಿದ್ದಾರೆ.ಸುಮಾರು 20ಸಾವಿರಕ್ಕೂ ಹೆಚ್ಚಿನ ಸಾರ್ವಜನಿಕರಿಗೆ ತಪಾಸಣೆ ಮಾಡಿ ಹೊಸ ದಾಖಲೆ ನಿರ್ಮಿಸಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ನಗರ ಭಾಗದ ಆಸ್ಪತ್ರೆಗಳೆಂದರೆ ತುಸು ಅಂಜಿಕೆ ಬರುವಂತ ದಿನಮಾನಗಳಲ್ಲಿ, ಜಿಲ್ಲಾ ಕೇಂದ್ರವನ್ನು ಬಿಟ್ಟು ದೂರದ ಹಳ್ಳಿಗಳಿಗೆ ಸ್ವಯಂ ಪ್ರೇರಿತರಾಗಿ ಬಂದು ತಪಾಸಣೆ ಮಾಡಿ ಔಷಧಗಳನ್ನೂ ನೀಡುತ್ತಿದ್ದಾರೆ. ಯಾವುದೇ ಫಲಾಪೇಕ್ಷೆ ಇಲ್ಲದೆಯೇ ಆರೈಕೆ ಆಸ್ಪತ್ರೆಯ ಮುಖಾಂತರ ಉಚಿತ ಆರೋಗ್ಯ ತಪಾಸಣೆ ಮಾಡಲಾಗುತ್ತಿದೆ. ಇದರ ಜತೆಗೆ ಉಚಿತವಾಗಿಔಷಧಗಳ್ನುನೀಡುವಮೂಲಕ ನಿಜಾರ್ಥದಲ್ಲಿ ಶಿಬಿರವನ್ನು ಸೇವೆಯ ರೀತಿ ಆಯೋಜಿಸುತ್ತಿರುವ ಪ್ರೀತಿ ಆರೈಕೆ ಟ್ರಸ್ಟ್ ಸಮಸ್ಥ ಸಿಬ್ಬಂದಿಗೆ ಅಭಿನಂದನೆಗಳು ಎಂದರು.ಆರೈಕೆ ಆಸ್ಪತ್ರೆಯ ಮುಖ್ಯಸ್ಥರಾದ ಡಾ. ಟಿ.ಜಿ. ರವಿಕುಮಾರ್ ಮಾತನಾಡಿ, ಜೀವನದಲ್ಲಿ ಎಲ್ಲರಿಗೂ ಅವರದ್ದೇ ಆದ ಮಹತ್ವಾಕಾಂಕ್ಷೆಗಳು ಇರುವುದು ಸಹಜ. ನಮ್ಮ ಕನಸು, ಗುರಿ, ಬಯಕೆ ಈಡೇರಿಸಿಕೊಳ್ಳಲು ಮುಖ್ಯವಾಗಿ ದೈಹಿಕ ಮತ್ತು ಮಾನಸಿಕ ಆರೋಗ್ಯ ಪ್ರಮುಖ ಪಾತ್ರ ವಹಿಸುತ್ತದೆ. ಇದನ್ನು ಮನದಲ್ಲಿಟ್ಟುಕೊಂಡು, ಪ್ರೀತಿ ಆರೈಕೆ ಟ್ರಸ್ಟ್ ಮೂಲಕ ಎಲ್ಲರಿಗೂ ಆರೋಗ್ಯ ತಪಾಸಣೆ ಮೂಲಕ ಆರೋಗ್ಯ ಜಾಗೃತಿ ಮೂಡಿಸಬೇಕು ಎಂಬ ಧ್ಯೇಯದೊಂದಿಗೆ ಹೆಜ್ಜೆ ಹಾಕುತ್ತಿದ್ದೇವೆ ಎಂದು ಹೇಳಿದರು. ಚನ್ನಗಿರಿಯ ಯುವ ನಾಯಕ ಮಾಡಾಳ್ ಮಲ್ಲಿಕಾರ್ಜುನ ಅವರು ತಪಾಸಣೆ ಶಿಬಿರಕ್ಕೆ ಭೇಟಿ ನೀಡಿ ಪ್ರೀತಿ ಆರೈಕೆ ಟ್ರಸ್ಟ್ ತಂಡಕ್ಕೆ ಶುಭ ಹಾರೈಸಿದರು. ಹೊನ್ನಾಳಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಸ್ಥರು ಆರೋಗ್ಯ ತಪಾಸಣೆ ಶಿಬಿರದಲ್ಲಿ ಪಾಲ್ಗೊಂಡು ನುರಿತ ವೈದ್ಯರಿಂದ ಸಲಹೆ, ಮಾರ್ಗದರ್ಶನ ಪಡೆದುಕೊಂಡರು. ಯುವಕರು ಮತ್ತು ಹಲವು ಕಾಲೇಜು ವಿದ್ಯಾರ್ಥಿಗಳು ಸ್ವಯಂಪ್ರೇರಿತರಾಗಿ ರಕ್ತದಾನ ಮಾಡಿದರು.





**ಅಟಲ್ ಸ್ಮೃತಿ, ರಕ್ತದಾನ ಶಿಬಿರ:** ಮಾಜಿ ಪ್ರಧಾನಿ ದಿ. ಅಟಲ್ ಬಿಹಾರಿ ವಾಜಪೇಯಿ ಅವರ 99ನೇ ಜನ್ಮದಿನದ ಅಂಗವಾಗಿ ರಕ್ತದಾನ ಶಿಬಿರವನ್ನು ಏರ್ಪಡಿಸಲಾಗಿತ್ತು. ಹಲವು ಕಾಲೇಜುಗಳು ವಿದ್ಯಾರ್ಥಿಗಳು ಸ್ವಯಂ ಪ್ರೇರಿತರಾಗಿ ಬಂದು ರಕ್ತದಾನ ಮಾಡುವ ಮೂಲಕ ಸಾರ್ಥಕತೆ ಮೆರೆದರು. ಡಾ. ಟಿ.ಜಿ. ರವಿಕುಮಾರ್ ಅವರು ರಕ್ತದಾನ ಮಾಡುವ ಮೂಲಕ ಶಿಬಿರಕ್ಕೆ ಚಾಲನೆ ನೀಡಿದ್ದು ವಿಶೇಷವಾಗಿತ್ತು.

## ಫಾಸ್ಟ್ ನ್ಯೂಸ್

### ಕುಷ್ಠರೋಗ ಚಿಕಿತ್ಸೆ ಮೂಲಕ ಗುಣ ಸಾಧ್ಯ



» ಮೊದಲ ಪುಟದಿಂದ

ಕುಷ್ಠರೋಗ ಪತ್ತೆ ಅಭಿಯಾನ ಜಾಥಾದಲ್ಲಿ ಆರೋಗ್ಯ ಇಲಾಖೆಯ ಅಧಿಕಾರಿಗಳು, ನರ್ಸಿಂಗ್ ಕಾಲೇಜು ವಿದ್ಯಾರ್ಥಿನಿಯರು ಜಾನಪದ ಕಲಾತಂಡಗಳು ಭಾಗವಹಿಸಿದ್ದರು. ಜಾಥಾವು ಜಿಲ್ಲಾ ಆಸ್ಪತ್ರೆಯ ಆವರಣದಿಂದ ಆರಂಭವಾಗಿ ಮದಕರಿ ಸರ್ಕಲ್, ತಾಲೂಕ ಕಚೇರಿ ಹಾಗೂ ನ್ಯಾಯಾಲಯ ಬೀದಿಗಳಲ್ಲಿ ಸಂಚರಿಸಿತು.

ಕುಷ್ಠರೋಗ ಸಂಬಂಧಿತ ಮಚ್ಚೆ ಗಳನ್ನು ಇಚ್ಛೆಯಿಂದ ಮುಚ್ಚಿಟ್ಟರೆ ಅಂಗವಿಕಲತೆ ಬರಬಹುದು. ಶೀಘ್ರ ಪತ್ತೆ ತ್ವರಿತ ಚಿಕಿತ್ಸೆಯಿಂದ ಕುಷ್ಠರೋಗವನ್ನು ಸಂಪೂರ್ಣವಾಗಿ ಗುಣಪಡಿಸಬಹುದು ಎಂಬ ಮಾಹಿತಿಯನ್ನು ಏಕಪಾತ್ರ ಅಭಿನಯದ ಮುಖಾಂತರ ಜನರಿಗೆ ತಿಳಿಯಪಡಿಸಲಾಯಿತು. ಜಾಥಾದಲ್ಲಿ ಫಲಕಗಳು ಹಾಗೂ ಸ್ಲೋಗನ್‌ಗಳನ್ನು ಪ್ರದರ್ಶಿಸಲಾಯಿತು.ಜಾಥ ಕಾರ್ಯಕ್ರಮದಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕ ಡಾಕ್ಟರ್ ರವೀಂದ್ರ, ಸಿ.ಎಚ್.ಓ. ಡಾ ಅಭಿನವ. ಆರ್. ತಾಲ್ಲೂಕು ಆರೋಗ್ಯ ಅಧಿಕಾರಿ ಡಾ.ಬಿ.ವಿ.ಗಿರೀಶ್. ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣನಾಯ್ಕ. ಉಪಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಗೌರಮ್ಮ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಜಾನಕಿ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ, ಮುಖ್ಯ ಆರೋಗ್ಯ ಮೇಲ್ವಿಚಾರಣಾ ಅಧಿಕಾರಿ ಎಂ ಬಿ ಹನುಮಂತಪ್ಪ, ಆರೋಗ್ಯ ನಿರೀಕ್ಷಣಾಧಿಕಾರಿ ಗಂಗಾಧರ್ ರೆಡ್ಡಿ, ಜಿಲ್ಲಾ ಕುಷ್ಠರೋಗ ನಿವಾರಣಾಧಿಕಾರಿ ಕಚೇರಿ ಮೇಲ್ವಿಚಾರಣಾಧಿಕಾರಿ ತಂಡದ ವೈ.ತಿಪ್ಪೇಶ್, ಎಂ ಚಂದ್ರಪ್ಪ. ಕೆ.ರಾಜೇಂದ್ರ ಪ್ರಸಾದ್. ಯು ಕಿರಣ್. ಮಂಜುನಾಥ. ಓಂಕಾರ ಸ್ವಾಮಿ ಸೇರಿದಂತೆ ಸಿಬ್ಬಂದಿ ವರ್ಗದವರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

### ರೈತರ ಅವಮಾನಿಸಿದ ಶಿವಾನಂದಪಾಟೀಲ್‌ರನ್ನು ಸಚಿವ ಸ್ಥಾನದಿಂದ ಕೈಬಿಡಿ

» ಮೊದಲ ಪುಟದಿಂದ

ರೈತರ ಬದುಕಿನ ಬಗ್ಗೆ ಲೇವಡಿ ಮಾಡಿರುವ ಸಕ್ಕರೆ ಸಚಿವ ಶಿವಾನಂದಪಾಟೀಲ್ ಸಚಿವ ಸ್ಥಾನವೇನು, ಶಾಸಕರ ಸ್ಥಾನಕ್ಕೂ ಯೋಗ್ಯರಲ್ಲ. ಆ ಭಾಗದ ಜನರು ಹಾಗೂ ರೈತರು ಮುಂಬರುವ ಚುನಾವಣೆಯಲ್ಲಿ ಶಿವಾನಂದಪಾಟೀಲ್‌ಗೆ ತಕ್ಕಪಾಠ ಕಲಿಸಬೇಕಿದೆ. ಯಾವ ರೈತನು ಶಿವಾನಂದಪಾಟೀಲ್ ಮನೆಗೆ ಹೋಗಿ ಯಾವುದೇ ಸೌಲಭ್ಯ ಕೇಳಿಲ್ಲ. ಆದರೂ ಸಹ ಸಾರ್ವಜನಿಕ ಸಭೆಯಲ್ಲಿ ಅನಗತ್ಯವಾಗಿ ರೈತರನ್ನು ಟೀಕಿಸಿರುವುದು ರಾಜ್ಯ ಕಾಂಗ್ರೆಸ್ ಸರ್ಕಾರ ರೈತರ ವಿರೋಧಿ ಸರ್ಕಾರವೆಂದು ಇದರಿಂದ ಖಾತ್ರಿಯಾಗಿದೆ ಎಂದರು. ತಾಲ್ಲೂಕು ಅಧ್ಯಕ್ಷ ಕೆ.ಸಿ.ಶ್ರೀಕಂಠಮೂರ್ತಿ ಮಾತನಾಡಿ, ರೈತರನ್ನು ಅವಮಾನಿಸುವಂತಹ ಕಾರ್ಯಕ್ಕೆ ರಾಜ್ಯಸರ್ಕಾರ ಸಚಿವರೊಬ್ಬರು ಕೈಹಾಕಿರುವುದು ದುರದೃಷ್ಟಕರ. ಕಳೆದ ಸೆಪ್ಟಂಬರ್ ತಿಂಗಳಲ್ಲೇ ಸಚಿವ ಶಿವಾನಂದಪಾಟೀಲ್ ರೈತರನ್ನು ಹೀಯಾಳಿಸಿದ್ದರು. ಬಿಸಿಲು, ನೆರಳು, ಮಳೆ, ಸಿಡಿಲು ಎನ್ನದೆ ಎದೆಯೊಡ್ಡಿ ಭೂಮಿಯನ್ನು ಬಿತ್ತಿಬೆಳೆಯುವ ರೈತ ದೇಶ ರಕ್ಷಿಸುವ ಸೈನಿಕನಷ್ಟೇ ಗೌರವಗಳಿಸಿದ್ದಾನೆ. ಆದರೆ, ಶಿವಾನಂದಪಾಟೀಲ್ ರೈತರ ಬಗ್ಗೆ ಕೀಳುವರ್ತನೆ ತೋರಿರುವುದು ನೋವಿನ ಸಂಗತಿ ಎಂದರು. ರೈತರನ್ನು ಕ್ಷಮೆಯಾಚಿಸದೇ ಇದ್ದಲ್ಲಿ ಅವರ ವಿರುದ್ಧ ಬೀದಿಗಳಿದು ಹೋರಾಟ ನಡೆಸುವ ಎಚ್ಚರಿಕೆ ನೀಡಿದರು. ಮನವಿ ಸ್ವೀಕರಿಸಿ ಮಾತನಾಡಿದ ತಹಶೀಲ್ದಾರ್ ರೇಹಾನ್‌ಪಾಷ, ತಾವು ಮುಖ್ಯಮಂತ್ರಿಗಳಿಗೆ ನೀಡಿದ ಮನವಿಯನ್ನು ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಕಳಿಸುವ ಭರವಸೆ ನೀಡಿದರು. ರೈತರು ಶಾಂತಿಯುತವಾಗಿ ತಾಲ್ಲೂಕು ಆಡಳಿತಕ್ಕೆ ಸಹಕಾರ ನೀಡುವಂತೆ ಮನವಿ ಮಾಡಿದರು. ಪ್ರತಿಭಟನೆಯಲ್ಲಿ ಪ್ರಧಾನ ಕಾರ್ಯದರ್ಶಿ ಆರ್.ಬಸವರಾಜು, ಜಿಲ್ಲಾ ಉಪಾಧ್ಯಕ್ಷ ಯರ‍್ರಿಸ್ವಾಮಿ, ಎ.ಅಜ್ಜಪ್ಪ, ತಿಪ್ಪೇಸ್ವಾಮಿ, ರಾಮಚಂದ್ರಪ್ಪ, ಎಚ್.ಚಂದ್ರಪ್ಪ, ಆರ್.ತಿಪ್ಪೇಸ್ವಾಮಿ, ಜಯಮ್ಮ, ರತ್ನಮ್ಮ, ಶಿವಣ್ಣ, ಸಣ್ಣಪಾಲಯ್ಯ, ಜಿ.ಎಚ್.ಹನುಮಂತಪ್ಪ, ಮಹಲಿಂಗಪ್ಪ, ಈರಣ್ಣ ಮುಂತಾದವರು ಪಾಲ್ಗೊಂಡಿದ್ದರು.

### ದೇವಾಲಯದ ಬಾಗಿಲಿಗೆ ಬೆಂಕಿ ಇಟ್ಟ ಕಿಡಿಗೇಡಿಗಳು

» ಹೊಸದುರ್ಗ

ಇತಿಹಾಸ ಪ್ರಸಿದ್ಧ ಹೊಯ್ಸಳರ ಕಾಲದ ದೇವಾಲವೊಂದರ ಕಬ್ಬುಣದ ಬಾಗಿಲು ಮುರಿದು ನಂತರದಲ್ಲಿ ಸಿಗುವ ಮರದ ಬಾಗಿಲಿಗೆ ಕಿಡಿಗೇಡಿಗಳು ಬೆಂಕಿ ಹಚ್ಚಿ ಸುಟ್ಟಿರುವ ಘಟನೆ ತಾಲೂಕಿನ ಶ್ರೀರಾಂಪುರ ಪೊಲೀಸ್ ಠಾಣಾ ವ್ಯಾಪ್ತಿಯ ಮತ್ತೋಡು ಹೋಬಳಿ ಕಾರೆಹಳ್ಳಿ ಗ್ರಾಮದಲ್ಲಿ ಸೋಮವಾರ ತಡರಾತ್ರಿ ನಡೆದಿದೆ. ಕಾರೆಹಳ್ಳಿ ಗ್ರಾಮದಲ್ಲಿರುವ ಹೊಯ್ಸಳರ ಕಾಲದ ಹರಿಹರೇಶ್ವರ ದೇವಾಲಯದಲ್ಲಿ ಈ ಘಟನೆ ನಡೆದಿದ್ದು ಕಳ್ಳತನಕ್ಕೆ ಯತ್ನಿಸಿದ್ದಾರಾ ಅಥವಾ ನಿಧಿಶೋಧನೆಗಾಗಿ ಈ ದುಷ್ಕೃತ್ಯ ನಡೆಸಲಾಗಿದೆಯಾ ಎಂಬ ಅನುಮಾನ ಸಾರ್ವಜನಿಕ ವಲಯದಲ್ಲಿ ಕೇಳಿ ಬರುತ್ತಿದೆ.

---

ತ್ರೈಮಾಸಿಕ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆ

# ಪರಿಶಿಷ್ಟರ ಮೇಲಿನ ದೌರ್ಜನ್ಯ ತಡೆಗೆ ಕಟ್ಟುನಿಟ್ಟಿನ ಕ್ರಮ; ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ

» ದಾವಣಗೆರೆ

ಪರಿಶಿಷ್ಟರ ಮೇಲಿನ ದೌರ್ಜನ್ಯ ತಡೆಗಟ್ಟಲು ಎಲ್ಲಾ ಮುಂಜಾಗ್ರತಾ ಕ್ರಮದ ಜೊತೆಗೆ ಘಟನೆಗಳು ನಡೆಯದಂತೆ ಜಾಗೃತಿ ಮೂಡಿಸಬೇಕೆಂದು ಜಿಲ್ಲಾಧಿಕಾರಿ ಡಾ: ವೆಂಕಟೇಶ್ ಎಂ.ವಿ ತಿಳಿಸಿದರು.

ಅವರು ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಾಲ್ಕನೇ ತ್ರೈಮಾಸಿಕ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಪರಿಶೀಲನೆ ನಡೆಸಿದ ವೇಳೆ ಮಾತನಾಡಿದರು. ಪರಿಶಿಷ್ಟರ ಮೇಲಿನ ದೌರ್ಜನ್ಯಕ್ಕೆ ಸಂಬಂಧಿಸಿದಂತೆ ಸೆಪ್ಟೆಂಬರ್ ಅಂತ್ಯಕ್ಕೆ 36 ಎಫ್‌ಐಆರ್ ದಾಖಲಾಗಿದ್ದು ಡಿಸೆಂಬರ್ ವರೆಗೆ ಒಟ್ಟು 48 ಪ್ರಕರಣಗಳಲ್ಲಿ ಎಫ್‌ಐಆರ್ ದಾಖಲಾಗಿರುತ್ತದೆ. ಆದರೆ ಎಫ್‌ಐಆರ್ ದಾಖಲಾದ ತಾಲ್ಲೂಕುಗಳಲ್ಲಿ ಹೆಚ್ಚಿನದಾಗಿ ದಾವಣಗೆರೆ 19 ಮತ್ತು ಚನ್ನಗಿರಿ ತಾಲ್ಲೂಕಿನಲ್ಲಿ 10 ಪ್ರಕರಣಗಳಿವೆ.

ದಾಖಲಾದ ಪ್ರಕರಣಗಳಲ್ಲಿ 27 ಪ್ರಕರಣಗಳಿಗೆ ಈಗಾಗಲೇ ಚಾರ್ಜ್‌ಶೀಟ್ ಸಲ್ಲಿಸಲಾಗಿದೆ.

12 ಪ್ರಕರಣಗಳಲ್ಲಿ ತನಿಖೆ ಹಂತದಲ್ಲಿದ್ದು 8 ಬಿ.ರಿಪೋರ್ಟ್ ಹಾಕಿದ್ದು 1 ಪ್ರಕರಣವನ್ನು ಇತರೆ ಕಾರಣದಿಂದ ವಿಲೆ ಮಾಡಲಾಗಿ 21 ಬಾಕಿ ಉಳಿದಿರುತ್ತವೆ. ಸೆಪ್ಟೆಂಬರ್ ವರೆಗೆ ಬಾಕಿ ಇದ್ದ 15 ಮತ್ತು ಅಕ್ಟೋಬರ್‌ನಿಂದ ಡಿಸೆಂಬರ್ ವರೆಗೆ 12 ಪ್ರಕರಣಗಳು ಸೇರಿ 27 ಪ್ರಕರಣಗಳಲ್ಲಿ ಎಫ್‌ಐಆರ್ ಮತ್ತು ಚಾರ್ಜ್‌ಶೀಟ್ ಹಂತದಲ್ಲಿ ಒಟ್ಟು 64 ಸಂತ್ರಸ್ಥರಿಗೆ 53 ಲಕ್ಷ ಪರಿಹಾರವನ್ನು ನೀಡಲಾಗಿದ್ದು 4 ಪ್ರಕರಣಗಳಲ್ಲಿ ಮಾತ್ರ ಪರಿಹಾರ ನೀಡುವುದು ಬಾಕಿ ಇರುತ್ತದೆ.



2018-19 ರಿಂದ 2023 ರ ಡಿಸೆಂಬರ್ 26 ರ ವರೆಗೆ ದೌರ್ಜನ್ಯ ತಡೆ ಕಾಯ್ದೆಯಡಿ ಮರಣ ಹೊಂದಿದ 7 ಜನರ ಕುಟುಂಬದ ವಾರಸುದಾರರಿಗೆ ಮಾಸಿಕ ಐದು ಸಾವಿರ ಮತ್ತು ಭತ್ಯೆ ಸೇರಿ ಪಿಂಚಣಿ ಮತ್ತು ಇವರ ಕುಟುಂಬದವರಿಗೆ ಈಗಾಗಲೇ 5 ಜನರಿಗೆ ಸರ್ಕಾರಿ ನೌಕರಿಯನ್ನು ನೀಡಲಾಗಿದ್ದು ಇಬ್ಬರಿಗೆ ಸರ್ಕಾರಿ ನೌಕರಿ ನೀಡಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.

ಇದಲ್ಲದೇ ದೌರ್ಜನ್ಯ ತಡೆ ಕಾಯ್ದೆಯಡಿ ದಾಖಲಾದ ಪ್ರಕರಣಗಳು ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಲ್ಲಿ ಪ್ರಕರಣಗಳು ನಡೆಯುತ್ತಿದ್ದು ಇದರಲ್ಲಿ ಡಿಸೆಂಬರ್ ತಿಂಗಳಲ್ಲಿ 4 ಪ್ರಕರಣಗಳನ್ನು ಇತ್ಯರ್ಥ ಮಾಡಲಾಗಿದ್ದು 142 ಪ್ರಕರಣಗಳ ಇತ್ಯರ್ಥಕ್ಕೆ ಬಾಕಿ ಇರುತ್ತವೆ.

ಸಮಿತಿ ಸದಸ್ಯರ ಮನವಿ ಮೇರೆಗೆ ಕಳೆದ ಸಭೆಯಲ್ಲಿ ಪರಿಶಿಷ್ಟರ ಮೇಲಿನ ದೌರ್ಜನ್ಯ ತಡೆ ಪ್ರಕರಣಗಳ ಪ್ರತ್ಯೇಕ ವಿಚಾರಣೆಗಾಗಿ ನ್ಯಾಯಾಲಯವನ್ನು ಸ್ಥಾಪನೆ ಮಾಡಬೇಕೆಂದು ಒತ್ತಾಯ ಮಾಡಿದ್ದು ಈ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಜಿಲ್ಲಾಧಿಕಾರಿಯವರು ತಿಳಿಸಿದರು.

ಸಮಿತಿ ಸದಸ್ಯರು ಇತರೆ ಸಾರ್ವಜನಿಕ ಕುಂದುಕೊರತೆಯ ಬಗ್ಗೆಯೂ ಗಮನಹರಿಸಲು ಪ್ರಸ್ತಾಪಿಸಿದ್ದು ಆಯಾ ಇಲಾಖೆ ಅಧಿಕಾರಿಗಳಿಗೆ ಕ್ರಮಕ್ಕೆ ಸೂಚನೆ ನೀಡಲಾಗಿದೆ ಎಂದರು.

ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಸಂತೋಷ್ ಎಂ.ವಿಜಯಕುಮಾರ್, ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್,ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರಾದ ಕೆ.ನಾಗರಾಜ್, ನಗರಾಭಿವೃದ್ದಿ ಕೋಶದ ಯೋಜನಾ ನಿರ್ದೇಶಕ ಮಹಂತೇಶ್ ಹಾಗೂ ಜಾಗೃತಿ ಸಮಿತಿ ಸದಸ್ಯರು ಮತ್ತು ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

---

## ಮಕ್ಕಳಲ್ಲಿ ಉತ್ತಮ ಆರೋಗ್ಯವಿದ್ದರೆ ಕಲಿಕೆ ಸರಾಗ

» ಚಳ್ಳಕೆರೆ

ಇತ್ತೀಚಿನ ದಿನಗಳಲ್ಲಿ ಮತ್ತೊಮ್ಮೆ ಕೊರೋನಾ ಮಾರಕ ನಮ್ಮನ್ನು ಬಾದಿಸುವುದೇ ಎಂಬ ಭಯ ನಮ್ಮನ್ನು ಕಾಡುತ್ತಿದೆ. ಜೆಎನ್-1 ಎಂಬ ತಳಿಯಿಂದ ಕೊರೋನಾ ಮತ್ತೆ ವ್ಯಾಪಿಸಲಿದ್ದು, ಈ ಬಗ್ಗೆ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕಿದೆ. ವಿದ್ಯಾರ್ಥಿಗಳು ಸಹ ಉತ್ತಮ ಆರೋಗ್ಯಕ್ಕಾಗಿ ಆರೋಗ್ಯ ಇಲಾಖೆಯ ಸಲಹೆ, ಸೂಚನೆ ಪಾಲಿಸಬೇಕೆಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಎನ್.ಕಾಶಿ ತಿಳಿಸಿದರು.

ನಗರದ ಕುವೆಂಪುಶಾಲೆಯಲ್ಲಿ ಶಾಲಾ ಮಕ್ಕಳ ಆರೋಗ್ಯ ತಪಾಸಣಾ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿದರು. ವಿದ್ಯಾರ್ಥಿಗಳಲ್ಲಿ ಇತ್ತೀಚಿನ ದಿನಗಳಲ್ಲಿ ರೋಗಗಳು ಬೇಗನೇ ವ್ಯಾಪಿಸುವುದು ಕಂಡುಬಂದಿದೆ. ರೋಗಬಂದನಂತರ ಕಷ್ಟಪಡುವಬದಲು ರೋಗಬಾರದಂತೆ ಮುನ್ನೆಚ್ಚರಿಕೆ ವಹಿಸುವುದು ಅವಶ್ಯಕ. ಈ ನಿಟ್ಟಿನಲ್ಲಿ ಆರೋಗ್ಯ ಇಲಾಖೆ ಶಾಲೆಗಳಲ್ಲಿ ಉಚಿತ ಶಿಬಿರ ನಡೆಸಿ ಜನರ ಆರೋಗ್ಯ ಸಧೃಢಗೊಳಿಸಲು ದೃಢಹೆಜ್ಜೆ ಇಟ್ಟಿದೆ ಎಂದರು.



ಪ್ರಾಸ್ತಾವಿಕವಾಗಿ ಮಾತನಾಡಿದ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಬಿ.ತಿಪ್ಪೇಸ್ವಾಮಿ, ಪ್ರಸ್ತುತ ಶಾಲೆಯ ಹೈಸ್ಕೂಲ್ ಮತ್ತು ಪ್ರೈಮರಿ ವಿಭಾಗದ ವಿದ್ಯಾರ್ಥಿಗಳಿಗೆ ಆರೋಗ್ಯ ತಪಾಸಣೆ ನಡೆಸಲಾಗುತ್ತಿದೆ. ರೋಗಮುಕ್ತ ಪ್ರದೇಶವಾಗಿ ನಮ್ಮ ಚಳ್ಳಕೆರೆ ತಾಲ್ಲೂಕು ಖ್ಯಾತಿಯಾಗಬೇಕಿದೆ. ಈಗಾಗಲೇ ಆರೋಗ್ಯ ಇಲಾಖೆ ತಾಲ್ಲೂಕಿನ ಅನೇಕ ಶಾಲೆಗಳಿಗೆ ಭೇಟಿ ನೀಡಿ ಆರೋಗ್ಯ ಜಾಗೃತಿ ಶಿಬಿರವನ್ನು ಯಶಸ್ವಿಯಾಗಿ ನಡೆಸುತ್ತಿದೆ ಎಂದರು. ಆಡಳಿತಾಧಿಕಾರಿ ಆರ್.ಕೃಷ್ಣಮೂರ್ತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ನಿವೃತ್ತ ಪ್ರಾಂಶುಪಾಲ ಸಿ.ಶಿವಲಿಂಗಪ್ಪ, ಡಾ.ಲತಾ, ಸಂದೀಪ್, ತಿಪ್ಪೇಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.

## ಶೋಷತ ಸಮುದಾಯಗಳು ಮೈಮರೆತು ಕೂತರೆ ತೊಂದರೆ

» ಮೊದಲ ಪುಟದಿಂದ

ಸಾಮಾಜಿಕ, ಧಾರ್ಮಿಕ ನೆಲೆಗಳಲ್ಲಿ ವಿಭಜನೆಯಾಗುತ್ತಿದೆ. ನಮ್ಮ ಮೇಲಿನ ದಬ್ಬಾಳಿಕೆಗೆ ಸಾಂಸ್ಕೃತಿಕ ಉಪಕರಣಗಳನ್ನು ಕಂಡುಕೊಳ್ಳಬೇಕು ಎಂದು ಹೇಳಿದರು.

ಅಪಾಯದ ಅಂಚಿನಲ್ಲಿರುವ ಸಂವಿಧಾನವನ್ನು ಉಳಿಸಿಕೊಳ್ಳಬೇಕಾಗಿರುವುದರಿಂದ ದಲಿತರು, ಹಿಂದುಳಿದವರು, ಶೋಷಿತರು, ಅಲ್ಪಸಂಖ್ಯಾತರು, ಆದಿವಾಸಿ, ಅಲೆಮಾರಿಗಳು ಒಗ್ಗಟ್ಟಿನಿಂದ ಇರಬೇಕಾಗುತ್ತದೆ. ಶೋಷಿತರ ಜಾಗೃತಿ ಸಮಾವೇಶವನ್ನು ಗಂಭೀರವಾಗಿ ತೆಗೆದುಕೊಳ್ಳಬೇಕು ಎಂದು ತಿಳಿಸಿದರು.ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್ ಮಾತನಾಡಿ ಮುಂದಿನ ತಿಂಗಳು ನಡೆಯಲಿರುವ ಶೋಷಿತರ ಜಾಗೃತಿ ಸಮಾವೇಶ ಯಾರ ವಿರುದ್ದವಾಗಿ ಅಲ್ಲ. ನಮ್ಮ ಹಕ್ಕುಗಳನ್ನು ಕಾಪಾಡಿಕೊಳ್ಳಬೇಕಾಗಿದೆ. ಜಾತಿ ಧರ್ಮಗಳ ವಿರುದ್ದ ಎತ್ತಿಕಟ್ಟುವ ಕೆಲಸವಾಗುತ್ತಿದೆ. ಎಲ್ಲಾ ಸಮಸ್ಯೆಗಳನ್ನು ಹೆದರಿಸಿ ಒಂದಾಗಿ ಬಾಳುವ ಹಕ್ಕು ನೀಡಿರುವುದು ಸಂವಿಧಾನ. ಕಾಂತರಾಜ್ ವರದಿಯನ್ನು ಸರ್ಕಾರ ಬಿಡುಗಡೆಗೊಳಿಸಬೇಕಿದೆ ಎಂದು ಒತ್ತಾಯಿಸಿದರು.ಮಾಜಿ ಶಾಸಕ ಎ.ವಿ.ಉಮಾಪತಿ ಮಾತನಾಡುತ್ತ ಹಿಂದುಳಿದ, ಶೋಷಿತ ಸಮುದಾಯಗಳ ಶಕ್ತಿ ಪ್ರದರ್ಶನವಾಗಬೇಕು. ಶೋಷಿತ ಸಮುದಾಯಗಳು ಮುಂದೆ ಒಂದಾಗಿದ್ದರೆ ರಾಜಕೀಯ ಶಕ್ತಿ ಪಡೆದುಕೊಳ್ಳಬಹುದು. ಅನೇಕ ಆಯೋಗಗಳು ಬಂದಿದೆ. ಕಾಂತರಾಜ್ ಆಯೋಗದ ವರದಿ ಜಾರಿಯಾಗಲೇಬೇಕು. ಮೇಲ್ಜಾತಿಯವರು ವರದಿ ಬಗ್ಗೆ ಭಯ ಪಡುವುದು ಏಕೆ? ಮುಖ್ಯಮಂತ್ರಿ ಸಿದ್ದರಾಮಯ್ಯನವರು ದಿಟ್ಟ ಹೆಜ್ಜೆ ಇಡಬೇಕಿದೆ ಎಂದರು.ಭೋವಿ ಸಮಾಜದ ಮುಖಂಡ ದಾವಣಗೆರೆ ಡಿ.ಬಸವರಾಜ್ ಮಾತನಾಡಿ ಹಿಂದುಳಿದ ವರ್ಗಗಳ ಸಮಾವೇಶಅನಿವಾರ್ಯತೆಯಿದೆ.ಮುಖ್ಯಮಂತ್ರಿಸಿದ್ದರಾಮಯ್ಯನವರಿಗೆ ವಿರೋಧ ಪಕ್ಷದವರು ಕಿರುಕುಳ ನೀಡುತ್ತಿರುವುದರಿಂದ ಶೋಷಿತ ಸಮುದಾಯಗಳು ಅವರ ರಕ್ಷಣೆಗೆ ನಿಲ್ಲಬೇಕಿದೆ ಎಂದು ಹೇಳಿದರು.

ಕರ್ನಾಟಕ ರಾಜ್ಯ ಟಿಪ್ಪುಸುಲ್ತಾನ್ ಅಭಿಮಾನಿಗಳ ಮಹಾವೇದಿಕೆ ರಾಜ್ಯಾಧ್ಯಕ್ಷ ಟಿಪ್ಪುಖಾಸಿಂ ಆಲಿ ಮಾತನಾಡುತ್ತ 260 ವರ್ಷಗಳ ಹಿಂದೆಯೇ ಹಿಂದುಳಿದ ಜನಾಂಗಕ್ಕೆ ಭೂಮಿಯ ಒಡೆತನ ನೀಡಿದ ಟಿಪ್ಪು ತನ್ನ ಸೈನ್ಯದಲ್ಲಿ ಶೇ.80 ರಷ್ಟು ದಲಿತರು, ಹಿಂದುಳಿದವರು, ಶೋಷಿತರನ್ನು ನೇಮಿಸಿಕೊಂಡಿದ್ದರು ಎಂದು ಸ್ಮರಿಸಿದರು.ಕಾಂಗ್ರೆಸ್ ಮುಖಂಡ ಜೆಜೆ. ಹಟ್ಟಿ ತಿಪ್ಪೇಸ್ವಾಮಿ, ಚಿತ್ರದುರ್ಗ ನಗರಾಭಿವೃದ್ದಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಆರ್.ಕೆ.ಸರ್ದಾರ್ ಇವರುಗಳು ಮಾತನಾಡಿದರು.

ಶೋಷಿತ ಸಮುದಾಯ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಎಣ್ಣೆಗೆರೆ ವೆಂಕಟರಾಮ್, ಹಿಂದುಳಿದ ಜಾತಿಗಳ ಒಕ್ಕೂಟದ ಉಪಾಧ್ಯಕ್ಷ ರಾಮಕೃಷ್ಣ, ವೆಂಕಟಪತಿ ಸುಬ್ಬರಾಜು, ಮೇಯರ್ ರಾಮಚಂದ್ರಪ್ಪ, ಪ್ರದೇಶ ಕುರುಬರ ಸಂಘದ ಅಧ್ಯಕ್ಷ ಮಾನವಿ ವೀರಣ್ಣ, ಕಾರ್ಯದರ್ಶಿ ಬಸವರಾಜ್ ಬಸಲಿಗುಂದಿ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಬಿ.ಯೋಗೇಶ್‌ಬಾಬು, ನಗರಸಭೆ ಮಾಜಿ ಅಧ್ಯಕ್ಷ ಸಿ.ಟಿ.ಕೃಷ್ಣಮೂರ್ತಿ, ಕುರುಬರ ಸಂಘದ ಜಿಲ್ಲಾಧ್ಯಕ್ಷ ಶ್ರೀರಾಮ್, ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಬಿ.ಟಿ.ಜಗದೀಶ್, ಸವಿತಾ ಸಮಾಜದ ಎನ್.ಡಿ.ಕುಮಾರ್ ವೇದಿಕೆಯಲ್ಲಿದ್ದರು.

## ಉಜ್ವಲ ಸೌಲಭ್ಯ ಪಡೆಯಲು ಉಸಿರುಗಟ್ಟಿ ನಿಂತ ಜನ

» ನಾಗತಿಹಳ್ಳಿಮಂಜುನಾಥ್

ಹೊಸದುರ್ಗ:ಸರ್ಕಾರದ ಸೌಲಭ್ಯಗಳನ್ನ ಪಡೆಯುವಲ್ಲಿ ಪ್ರತಿಯೊಬ್ಬರೂ ಸಹಾ ಶ್ರಮ ಪಡುವುದು ಅನಿವಾರ್ಯ

ಸರ್ಕಾರದ ಯೋಜನೆಗಳೆಂದರೆ ಕೆಲವರು ಮೂಗು ಮುರಿಯುತ್ತಾರೆ ಮತ್ತೆ ಕೆಲವರು ಅದನ್ನ ನಮ್ಮ ಸೌಭಾಗ್ಯ ಎಂದು ಸೌಲಬ್ಯ ಪಡೆಯಲು ನಿತ್ಯ ಕೆಲಸ ಕಾರ್ಯಗಳನ್ನ ಬದಿಗೊತ್ತಿ ಸೌಲಭ್ಯ ಪಡೆಯುವ ಸಲುವಾಗಿ ಸರದಿ ಸಾಲಿನಲ್ಲಿ ದಿನವಿಡಿ ನಿಲ್ಲಲ್ಲು ಮುಂದಾಗುತ್ತಾರೆ ಇದಕ್ಕೆ ತಾಜಾ ಉದಾಹರಣೆ ಎಂದರೆ "ಉಜ್ವಲ ಯೋಜನೆ"

ಕೇಂದ್ರ ಸರ್ಕಾರ ಉಜ್ವಲ ಯೋಜನೆಯಡಿ ಉಚಿತ ಗ್ಯಾಸ್ ವಿತರಿಸಲು ಅರ್ಜಿ ಆಹ್ವಾನಿಸಿದ ಹಿನ್ನೆಲೆಯಲ್ಲಿ ಪಟ್ಟಣದ ಗ್ಯಾಸ್ ವಿತರಕರ ಕಚೇರಿ ಎದುರು ಮಂಗಳವಾರ ಮುಂಜಾನೆ 6 ಗಂಟೆಯಿಂದ ನೂರಾರು ಜನ ಪುರುಷರು ಮತ್ತು ಮಹಿಳೆಚುರು ದೌಡಾಯಿಸಿದ್ದಾರೆ. ಜನರ ನಿಯಂತ್ರಣಕ್ಕಾಗಿ ಪೋಲಿಸರು ಮುಂದಾಗಿದ್ದಾರೆ.ಬಂದಿದ್ದವರಲ್ಲಿ ಪುರುಷರಿಗಿನ್ನ ಮಹಿಳೆಚುರೇ ಹೆಚ್ಚಿದ್ದರು.




ಕಳೆದ ಕೆಲ ದಿನಗಳಿಂದ ಹೆಬ್ಬೆಟ್ಟು (ಥಮ್) ಪಡೆಯಲಾಗುತ್ತಿತ್ತು. ಕಳೆದ ಮೂರು ದಿನಗಳಿಂದ ಸಾಲು ರಜೆಗಳಿದ್ದ ಕಾರಣ ಬೆರಳಚ್ಚು ಪಡೆಯುವ ಕಾರ್ಯ ನಿಂತಿತ್ತು. ಮಂಗಳವಾರ ಬೆಳಿಗ್ಗೆ 8 ಗಂಟೆಯಿಂದಲೇ ಜನರು ಸರದಿ ಸಾಲಿನಲ್ಲಿ ನಿಂತಿದ್ದರು. 11 ಗಂಟೆಯಾಗುತ್ತಿದ್ದಂತೆ ನೂರಾರು ಜನ ದೌಡಾಯಿಸಿದ್ದರು. ತಳ್ಳಾಟ ತುಸು ಜೋರಾಗಿಯೇ ಇತ್ತು. ಈ ನಡುವೆ ರಕ್ಷಣೆಗಾಗಿ ಪೋಲಿಸರು ಸ್ಥಳಕ್ಕೆ ಧಾವಿಸಿದರು.

ನಾವು ಪ್ರತಿ ಗ್ರಾಮಗಳಿಗೂ ತೆರಳಿ, ಬೆರಳಚ್ಚು ಪಡೆಯಲಾಗುತ್ತದೆ. ಅಗತ್ಯ ದಾಖಲೆಗಳನ್ನು ಸಹ ಪಡೆಯುತ್ತೇವೆ.

---

**ಪ್ರಮುಖ ಸುದ್ದಿ**

# ಸಚಿವ ಶಿವಾನಂದ್ ಪಾಟೀಲ್‌ರನ್ನು ಕೂಡಲೇ ವಜಮಾಡಿ

» ಚಿತ್ರದುರ್ಗ

ಸಾಲ ಮನ್ನಾ ಆಸೆಗಾಗಿ ರೈತರು ಬರಗಾಲ ಬರಲಿ ಅಂತ ಕಾಯ್ತಾರೆ ಎಂಬ ಸಕ್ಕರೆ ಸಚಿವ ಶಿವಾನಂದ್ ಪಾಟೀಲ್ ಹೇಳಿಕೆ ಖಂಡನೀಯ ಸರ್ಕಾರ ಕೂಡಲೇ ದುರಹಂಕಾರಿ ಸಚಿವರನ್ನು ಸಚಿವ ಸಂಪುಟದಿಂದ ವಜಾ ಮಾಡುವಂತೆ ಕರ್ನಾಟಕ ರಾಜ್ಯ ರೈತ ಸಂಘ ಒತ್ತಾಯಿಸಿದೆ.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಬಳಿ ಪ್ರತಿಭಟನೆಯನ್ನು ನಡೆಸಿದ ರೈತ ಸಂಘದ ಪದಾಧಿಕಾರಿಗಳು, ಅನ್ನದಾತರ ಬಗ್ಗೆ ಕಾಳಜಿ ಇಲ್ಲದ ಕರ್ನಾಟಕ ರಾಜ್ಯ ಸರ್ಕಾರದ ಸಕ್ಕರೆ ಸಚಿವ ಶಿವಾನಂದ ಪಾಟೀಲ್ ರವರು ರೈತರ ಬಗ್ಗೆ ಎಳ್ಳಷ್ಟು ಕಾಳಜಿ ಇಲ್ಲದ ಹಾಗೆ ಸಾಲ ಮನ್ನಾ ಆಸೆಗಾಗಿ ರೈತರು ಬರಗಾಲ ಬರಲಿ ಅಂತ ಕಾಯ್ತಾರೆ ಎಂಬ ಹೇಳಿಕೆ ರೈತ ವಿರೋಧಿ ನೀತಿಯಾಗಿದೆ ಯಾವುದೇ ರೈತರು ಸಾಲಮನ್ನಾಕ್ಕಾಗಿ ಬರಗಾಲ ಆಹ್ವಾನಿಸುವುದಿಲ್ಲ ಯಾವುದೇ ರಾಜ್ಯ ಸರ್ಕಾರ ರೈತರಿಗೆ ಉಚಿತವಾಗಿ ಬಿತ್ತನೆ ಬೀಜ ಗೊಬ್ಬರ ಯಾವುದನ್ನು ಇದುವರೆಗೂ ನೀಡಿರುವುದಿಲ್ಲ ರೈತರು ಬೆಳೆದ ಬೆಳೆಗೆ ವೈಜ್ಞಾನಿಕ ಬೆಂಬಲ ಬೆಲೆ ನೀಡಿರುವುದಿಲ್ಲ ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಕನಿಷ್ಠ ಬೆಂಬಲ ಬೆಲೆಗೆ ಕಾಯ್ದೆ ರೂಪಿಸಿರುವುದಿಲ್ಲ ಅತಿವೃಷ್ಟಿ ಹಾಗು ಅನಾವೃಷ್ಟಿಯಿಂದ ರೈತರು ಪ್ರತಿಸಾರಿಯು ನಷ್ಟ ಅನುಭವಿಸುತ್ತಿರುತ್ತಾರೆ ಮಾರುಕಟ್ಟೆಯಲ್ಲಿ ಬೆಲೆ ಸಿಗದಿದ್ದಂತ ಪಕ್ಷದಲ್ಲಿ ತಾನು ಬೆಳೆದ ಹಣ್ಣು, ತರಕಾರಿ, ಇತರೆ ತೋಟದ ಬೆಳೆಗಳನ್ನು ತಿಪ್ಪೆಗೆ ಸುರಿದು, ರಸ್ತೆಗೆ ಸುರಿದು, ಸರ್ಕಾರದ ಬಳಿ ರೈತರು ನೋವನ್ನು ತೋಡಿಕೊಂಡ ಅನೇಕ ಸಾವಿರಾರು ಉದಾಹರಣೆಗಳು ಕಣ್ಮುಂದಿವೆ ಎಂದಿದ್ದಾರೆ. ಇಂತಹ ಸಂದರ್ಭದಲ್ಲಿ ಸಚಿವರು ಅಸಂವಿಧಾನಿಕವಾಗಿ ಪದಬಳಕೆ ಮಾಡಿರುವುದು ನಾಡಿನ ಅನ್ನದಾತರಿಗೆ ಮಾಡಿರುವಂತಹ ಅಪಮಾನ ಕಳೆದ ಮುಂಗಾರಿನಲ್ಲಿ ತೀವ್ರ ಬರಗಾಲ ಆವರಿಸಿ ರಾಜ್ಯದ ಸುಮಾರು 212 ತಾಲೂಕುಗಳನ್ನು ರಾಜ್ಯ ಸರ್ಕಾರ ಬರಪೀಡಿತ ಪ್ರದೇಶ ಎಂದು ಘೋಷಿಸಿದೆ, ರೈತರು ನಷ್ಟ ಅನುಭವಿಸಿರುವ ರೂ 33,700 ಕೋಟಿ ನಷ್ಟವನ್ನು ರಾಜ್ಯದ ಮುಖ್ಯಮಂತ್ರಿಗಳು, ಮತ್ತು ಕಂದಾಯ ಸಚಿವರು ಪ್ರಧಾನಿ ಭೇಟಿಯಾಗಿ 17,900 ಕೋಟಿ ರೂಪಾಯಿ ಬೆಳೆ ನಷ್ಟ ಪರಿಹಾರ ನೀಡುವಂತೆ ಮನವಿ ಮಾಡಿದಂತ ಸಂದರ್ಭದಲ್ಲಿ ಈ ದುರಹಂಕಾರಿ ರೈತ ವಿರೋಧಿ, ಕರ್ನಾಟಕ ರಾಜ್ಯ ಸರ್ಕಾರದ ಸಕ್ಕರೆ ಸಚಿವ ಶಿವಾನಂದ ಪಾಟೀಲ್‌ರನ್ನು ಮುಖ್ಯಮಂತ್ರಿಗಳು ಕೂಡಲೇ ಸಚಿವ ಸಂಪುಟದಿಂದ ವಜಾ ಮಾಡುವಂತೆ ಒತ್ತಾಯಿಸುತ್ತಿದ್ದೇನೆ. ವಿಳಂಬ ಧೋರಣೆ ಕೈಗೊಂಡಲ್ಲಿ ಜಿಲ್ಲೆಯಾದ್ಯಂತ ಕರ್ನಾಟಕ ರಾಜ್ಯ ರೈತ ಸಂಘದ ನೇತೃತ್ವದಲ್ಲಿ ಉಗ್ರ ಹೋರಾಟ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದ್ದಾರೆ.ಈ ಸಂದರ್ಭದಲ್ಲಿ ರೈತ ಮುಖಂಡರಾಧ ಭೂತಯ್ಯ, ಧನಂಜಯ, ಚಿಕ್ಕಪ್ಪನಹಳ್ಳಿ ರುದ್ರಸ್ವಾಮಿ, ಭೂತಯ್ಯ, ಧನಂಜಯ, ಎಂ.ಬಿ.ತಿಪ್ಪೇಸ್ವಾಮಿ ಇತರರು ಇದ್ದರು.



## ಫಾಸ್ಟ್ ನ್ಯೂಸ್

### ಅರಣ್ಯ ಪ್ರದೇಶದಲ್ಲಿ ಕೃಷ್ಣಮೃಗ ಭೇಟೆಯಾಡಿದ ಇಬ್ಬರ ಬಂಧನ



» **ಚಳ್ಳಕೆರೆ**
ಅರಣ್ಯ ಕಾಯ್ದೆಯನ್ನು ಉಲ್ಲಂಘಿಸಿ ಕೃಷ್ಣಮೃಗವನ್ನು ಭೇಟೆಯಾಡಿದ ಇಬ್ಬರು ವ್ಯಕ್ತಿಗಳನ್ನು ಬಂಧಿಸಿ ಕಾನೂನು ಕ್ರಮ ಕೈಗೊಂಡಿದೆ ಎಂದು ಅರಣ್ಯ ಸಂರಕ್ಷಣಾಧಿಕಾರಿ ಡಿ.ಬಹುಗುಣ ತಿಳಿಸಿದ್ದಾರೆ. ಅವರು, ಈ ಬಗ್ಗೆ ಮಾಹಿತಿ ನೀಡಿ, ತಾಲ್ಲೂಕಿನ ಬಡವನಹಳ್ಳಿ ಅರಣ್ಯ ಪ್ರದೇಶದಲ್ಲಿ ಕಾಟಪ್ಪನಹಳ್ಳಿಯ ರಾಮಮೂರ್ತಿ ಮತ್ತು ಪಾಪಣ್ಣ ಎಂಬುವವರು ಹಣದಾಸೆಗಾಗಿ ದುರಾಸೆಯಿಂದ ಇಲಾಖೆಯ ಕಣ್ಣುತಪ್ಪಿಸಿ ಅರಣ್ಯ ಕಾಯ್ದೆಯನ್ನು ಉಲ್ಲಂಘಿಸಿ ಕೃಷ್ಣಮೃಗವನ್ನು ಭೇಟೆಯಾಡಿ ಕೃಷ್ಣಮೃಗವನ್ನು ಸಾಗಾಟ ಮಾಡುವ ಸಂದರ್ಭದಲ್ಲಿ ಅವರನ್ನು ಬಂಧಿಸಲಾಗಿದೆ. ಬಂಧಿತರಿಂದ ಭೇಟೆಯಾಡಿದ ಮೃತ ಕೃಷ್ಣಮೃಗ ದೇಹವನ್ನು ವಶಪಡಿಸಿಕೊಂಡು ಅವರ ವಿರುದ್ದ ಪ್ರಕರಣ ದಾಖಲು ಮಾಡಲಾಗಿದೆ ಎಂದು ತಿಳಿಸಿದ್ದಾರೆ. ಸಾರ್ವಜನಿಕರಲ್ಲಿ ಮನವಿ ಮಾಡಿರುವ ಅವರು, ತಾಲ್ಲೂಕಿನ ಯಾವುದೇ ಪ್ರದೇಶದಲ್ಲಾಗಲಿ ಅನಗತ್ಯವಾಗಿ ಪ್ರಾಣಿಗಳನ್ನು ಭೇಟೆಯಾಡುವ ಯಾರೇ ಇದ್ದರೂ ಇಲಾಖೆಗೆ ಮಾಹಿತಿ ನೀಡುವಂತೆ ಮನವಿ ಮಾಡಿದ್ಧಾರೆ.

### ಪರಶುರಾಮಪುರ, ಜಾಜೂರು ಮುಂತಾದ ಗ್ರಾಪಂ ವ್ಯಾಪ್ತಿಯಲ್ಲಿ ಇಂದು ವಿದ್ಯುತ್ ಸ್ಥಗಿತ



» **ಚಳ್ಳಕೆರೆ**
ಬೆಸ್ಕಾಂನ ಚಳ್ಳಕೆರೆ ಉಪವಿಭಾಗದ 66/11 ಕೆ.ವಿ.ವಿದ್ಯುತ್ ವಿತರಣಾ ಕೇಂದ್ರ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಇರುವುದರಿಂದ 28ರ ಗುರುವಾರ ಬೆಳಗ್ಗೆ 10ರಿಂದ ಸಂಜೆ 4ರ ತನಕ ವಿದ್ಯುತ್ ಸರಬರಾಜನ್ನು ತಡೆಯಲಾಗುವುದು. ಸಾರ್ವಜನಿಕರು ಸಹಕರಿಸುವಂತೆ ಎಇಇ ರಾಜು ಮನವಿ ಮಾಡಿದ್ಧಾರೆ. ಜಾಜೂರು, ಪಗಡಲಬಂಡೆ, ಪರಶುರಾಮಪುರ, ಸಿದ್ದೇಶ್ವರನದುರ್ಗ, ದೊಡ್ಡಚೆಲ್ಲೂರು, ಚೌಳೂರು, ಪಿ.ಮಹದೇವಪುರ, ದೊಡ್ಡಬೀರನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳು ಹಾಗೂ ಸುತ್ತಮುತ್ತಲ ಗ್ರಾಮಗಳಲ್ಲಿ ವಿದ್ಯುತ್ ಸರಬರಾಜು ಸ್ಥಗಿತಗೊಳ್ಳಲಿದ್ದು ಸಾರ್ವಜನಿಕರ ಸಹಕಾರ ಕೋರಿದೆ.

### ನಮ್ಮ ಕಾರ್ಗೋ ಟ್ರಕ್ ಸೇವೆ ಆರಂಭ

» **ದಾವಣಗೆರೆ**
ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು ಸರಕು ಸಾಗಾಟ ಮಾಟುವ ನಿಟ್ಟಿನಲ್ಲಿ ಸಾರ್ವಜನಿಕರ ಅನುಕೂಲಕ್ಕಾಗಿ ನಮ್ಮ ಕಾರ್ಗೋ ಟ್ರಕ್ ಸೇವೆಯನ್ನು ಪ್ರಾರಂಭಿಸಲಾಗಿದೆ.ಸಾರಿಗೆ ನಿಗಮವು ಸರಕು ಸಾಗಾಟ ಮಾಡಲು 1 ರಿಂದ 100ಕಿ.ಮೀ ಕಾರ್ಯಚರಣೆಗೆ ಪ್ರತಿ ಕಿ.ಮೀ ಗೆ 50 ರೂ, 200 ಕಿ.ಮೀ ಕಾರ್ಯಚರಣೆಗೆ ಪ್ರತಿ ಕಿ.ಮೀ ಗೆ 40ರೂ ಹಾಗೂ 200 ಕಿ.ಮೀ ಮೇಲ್ಪಟ್ಟ ಕಾರ್ಯಚರಣೆಗೆ ಪ್ರತಿ ಕಿ.ಮೀಗೆ ರೂ 35 ನಿಗಧಿ ಪಡಿಸಲಾಗಿದೆ.ರಿಯಾಯಿತಿ ಸೌಲಭ್ಯ: ಟ್ರಕ್ ಮೂಲಕ ಸರಕು ಸಾಗಾಣೆ ಸೌಲಭ್ಯ ಪಡೆಯುವ ಗ್ರಾಹಕ ಹಾಗೂ ಸಂಸ್ಥೆಗಳು ಹೋಗುವ ಮತ್ತು ಬರುವ ಎರಡು ಮಾರ್ಗದ ಸರಕು ಸಾಗಾಣೆಗಾಗಿ ಬುಕಿಂಗ್ ಮಾಡಿದಲ್ಲಿ ಅಥವಾ ಖಚಿತವಾದ ವ್ಯವಹಾರ ನೀಡಿದಲ್ಲಿ ಅಂತವರ ಜೊತೆಯಲ್ಲಿ ಸೂಕ್ತ ಒಡಂಬಡಿಕೆ ಮಾಡಿಕೊಳ್ಳಲಾಗುವುದು. ಟ್ರಕ್ ಬುಕ್ಕಿಂಗ್ ಮಾಡಲು ಹಾಗೂ ಹೆಚ್ಚಿನ ಮಾಹಿತಿಗಾಗಿ ವಿಭಾಗೀಯ ಸಂಚಾರಿ ಅಧಿಕಾರಿ ದೂ. 7760990452, ವಿಭಾಗೀಯ ತಾಂತ್ರಿಕ ಅಭಿಯಂತರ ದೂ. 7760990451, ಘಟಕ ವ್ಯವಸ್ಥಾಪಕರ ದೂ.7760990463ಗೆ ಸಂಪರ್ಕಿಸಬಹುದೆಂದು ಕ.ರಾ.ರ.ಸಾ ನಿಗಮ ದಾವಣಗೆರೆ ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾರಿ ತಿಳಿಸಿದ್ದಾರೆ.

### ಡಿ.29 ರಂದು ವಿಶ್ವಮಾನವ ದಿನಾಚರಣೆ

» **ದಾವಣಗೆರೆ**
ಜಿಲ್ಲಾಡಳಿತ ವತಿಯಿಂದ ಡಿ.29 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನದ ತುಂಗಾಭದ್ರ ಸಭಾಂಗಣದಲ್ಲಿ ಶ್ರೀವಿಶ್ವಮಾನವ ದಿನಾಚರಣೆಯ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

### ವಿವಿಧ ಕಲಾತಂಡಗಳೊಂದಿಗೆ ಸಾಲು ಎತ್ತಿನ ಗಾಡಿಗಳ ವೈಭದ ಮೆರವಣಿಗೆ

# ದುರ್ಗ ಪ್ರವೇಶಿಸಿದ ಮಿಂಚೇರಿ ಯಾತ್ರೆ

» **ಚಿತ್ರದುರ್ಗ**
ತಾಲ್ಲೂಕಿನ ಬಚ್ಚಬೋರನಹಟ್ಟಿ ಗ್ರಾಮದ ಆರಾಧ್ಯ ದೈವ ಗಾದ್ರಿಪಾಲನಾಯಕ ಸ್ವಾಮಿಯ ಮಿಂಚೇರಿ ಯಾತ್ರೆ ಬುಧವಾರ ಮಧ್ಯಾಹ್ನ 2.30ಕ್ಕೆ ಚಿತ್ರದುರ್ಗ ನಗರ ಪ್ರವೇಶಿಸಿತು.

ರಾಷ್ಟ್ರೀಯ ಹೆದ್ದಾರಿ 4ರ ಹೋಟೆಲ್ ಬಿಗ್ ಬಾಸ್ ಸಮೀಪದಲ್ಲಿ ಮಿಂಚೇರಿ ಯಾತ್ರಾ ಮಹೋತ್ಸವವನ್ನು ಚಳ್ಳಕೆರೆ ಶಾಸಕರಾದ ಟಿ.ರಘುಮೂರ್ತಿ, ತಾಲ್ಲೂಕು ನಾಯಕ ಸಮುದಾಯದ ಅಧ್ಯಕ್ಷ ಬಿ. ಕಾಂತರಾಜ್ ಅದ್ದೂರಿಯಾಗಿ ಬರ ಮಾಡಿಕೊಂಡು, ಪೂಜೆ ಸಲ್ಲಿಸಿ ನಂತರ ಭವ್ಯ ಮೆರವಣಿಗೆಗೆ ಚಾಲನೆ ನೀಡಿದರು.

ರಾಷ್ಟ್ರೀಯ ಹೆದ್ದಾರಿ-4ರ ಬಿಗ್ ಬಾಸ್ ಹೋಟೆಲ್ ಸಮೀಪದಿಂದ ಪ್ರಾರಂಭವಾದ ಬುಡಕಟ್ಟು ಸಮುದಾಯದ ಸಾಲು-ಸಾಲು ಎತ್ತಿನ ಗಾಡಿಗಳ ಮೆರವಣಿಗೆಯು ರೈಲ್ವೆ ನಿಲ್ದಾಣದಿಂದ ಆಜಾದ್ ಫ್ಲೋರ್‌ಮಿಲ್, ಕೆಎಸ್ಆರ್‌ಟಿಸಿ ಬಸ್ ನಿಲ್ದಾಣ, ಗಾಂಧಿ ವೃತ್ತ, ಎಸ್‌ಬಿಐ ವೃತ್ತ, ಅಂಬೇಡ್ಕರ್ ವೃತ್ತ ಮಾರ್ಗವಾಗಿ ಸಾಗಿ, ಮೆಜೆಸ್ಟಿಕ್ ವೃತ್ತದಲ್ಲಿ ಇರುವ ಮದಕರಿ ನಾಯಕರ ಪ್ರತಿಮೆಗೆ ಮಾಲಾರ್ಪಣೆ ಮಾಡಲಾಯಿತು. ನಂತರ ಕೆಳಗೋಟೆಯ ಚನ್ನಕೇಶವ ಸ್ವಾಮಿ ದೇಗುಲದಲ್ಲಿ ವಿಶೇಷ ಪೂಜೆ ಸಲ್ಲಿಸಿ ಅಲ್ಲಿಂದ ಬಚ್ಚಬೋರನಹಟ್ಟಿ ಗ್ರಾಮಕ್ಕೆ ಮೆರವಣಿಗೆ ಸಾಗಿತು.

ಮೆರವಣಿಗೆಯ ಮಾರ್ಗದುದ್ದಕ್ಕೂ ನಗರದ ಜನತೆಯು ಮಿಂಚೇರಿ ಯಾತ್ರೆಯ ಭಕ್ತಾದಿಗಳಿಗೆ ಮಜ್ಜಿಗೆ, ತಂಪು ಪಾನೀಯ, ಕುಡಿಯುವ ನೀರು, ಊಟ ಸೇರಿ ಇತರೆ ಸೌಲಭ್ಯಗಳನ್ನು ನೀಡಿ ಸತ್ಕರಿಸಲಾಯಿತು. ರಸ್ತೆಯ ಅಕ್ಕಪಕ್ಕ ಸಾವಿರಾರು ಮಂದಿ ನಿಂತು ಬುಡಕಟ್ಟು ವೈಭವ ವೀಕ್ಷಿಸಿ ಕಣ್ತುಂಬಿಕೊಂಡರು. ಯುವಕರು ಕುಣಿದು ಸಂಭ್ರಮಿಸಿದರು.

ವಿವಿಧ ಜನಪದ ಕಲಾಪ್ರಕಾರಗಳಾದ ಸೋಬಾನೆ, ಉರುಮೆ, ಖಾಸಬೇಡರ ಪಡೆ, ಗೊಂಬೆ ಕುಣಿತ, ಕೋಲಾಟ ಮೆರವಣಿಗೆಗೆ ವಿಶೇಷ ಮೆರಗು ನೀಡಿತು.








ಡಿ. 28ರಂದು ಬಚ್ಚಬೋರನಹಟ್ಟಿ ಕಕ್ಕಲಬೆಂಚುವಿನಲ್ಲಿ ವಿಶೇಷ ಪೂಜೆ ಸಲ್ಲಿಸಿ, ಗ್ರಾಮದ ಸಮೀಪದಲ್ಲಿನ ದೇವರ ಬಂಡೆ ಹಾಗೂ ಬಸವಣ್ಣನ ಬಾವಿ ಬಳಿ ಗಂಗಾಮಾತೆ ಪೂಜೆ ನೆರವೇರಲಿದೆ. ನಂತರ ಗಾದ್ರಿ ಪಾಲನಾಯಕ ಸ್ವಾಮಿ ಗುಡಿದುಂಬಿಸುವ ಕಾರ್ಯಕ್ರಮ ನಡೆಯಲಿದೆ.

ಜಿಲ್ಲಾಮದಕರಿನಾಯಕವಿದ್ಯಾಸಂಸ್ಥೆಯ ಅಧ್ಯಕ್ಷ ಎಸ್.ಸಂದೀಪ್, ಉದ್ಯಮಿ ಅರುಣ್ ಕುಮಾರ್, ಸಮುದಾಯದ ಮುಖಂಡರಾದ ಯೋಗೇಶ್ ಬಾಬು, ಅಂಜಿನಪ್ಪ, ಸೂರಯ್ಯ ಸೇರಿದಂತೆ ಮತ್ತಿರರು ಇದ್ದರು.

ಈ ವೇಳೆ ಮಾತನಾಡಿದ ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ, ಬುಡಕಟ್ಟು ಸಂಸ್ಕೃತಿಯ ನಾಯಕ ಜನಾಂಗದ ನಾಯಕ ಎಂದೇ ಹೆಸರಾಗಿರುವ ಗಾದ್ರಿಪಾಲನಾಯಕ ಗೋ ಸಂರಕ್ಷಕ ಮತ್ತು ಹುಲಿಯೊಂದಿಗೆ ಕಾದಾಡುವ ಮೂಲಕ ಬುಡಕಟ್ಟು ವೀರರಾಗಿ ಹೊರಹೊಮ್ಮಿದ್ದಾರೆ ಎಂದು ಹೇಳಿದರು.

ನಾಯಕ ಸಮಾಜದಲ್ಲಿ ಬುಡಕಟ್ಟು ಸಂಸ್ಕೃತಿಯ ಪರಂಪರೆಯನ್ನು ಮೈಗೂಡಿಸಿಕೊಂಡು ಬಂದಿದ್ದೇವೆ. ಆಚಾರ ವಿಚಾರಗಳು, ಪದ್ಧತಿಗಳು ಭವಿಷ್ಯದ ಪೀಳಿಗೆಗೆ ಮಿಂಚೇರಿ ಅಂತಹ ಜಾತ್ರೆಗಳ ಮೂಲಕ ತಿಳಿಯುತ್ತವೆ. ಐದು ವರ್ಷಗಳಿಗೆ ಒಮ್ಮೆ ಮಿಂಚೇರಿ ಜಾತ್ರೆ ನಡೆಯಲಿದ್ದು, ಮಿಂಚೇರಿ ನಮ್ಮ ಪುಣ್ಯಕ್ಷೇತ್ರ ಮತ್ತು ಧಾರ್ಮಿಕ ಕೇಂದ್ರವಾಗಿದೆ ಎಂದರು.

ಯುವ ಪೀಳಿಗೆಯು ನಮ್ಮ ಸಂಸ್ಕಾರ ಸಂಸ್ಕೃತಿ ಮರೆಯುತ್ತಿರುವ ಪ್ರಸ್ತುತ ದಿನಗಳಲ್ಲಿ ಮಿಂಚೇರಿ ಯಾತ್ರೆ ಬುಡಕಟ್ಟು ಸಮುದಾಯಕ್ಕೆ ಒಂದು ದೊಡ್ಡ ಸಂದೇಶ ನೀಡುವ ಜೊತೆಗೆ ಬುಡಕಟ್ಟು ವೀರರ ಇತಿಹಾಸ ಸಾರುತ್ತಿದ್ದು ಈ ಜಾತ್ರೆಯಲ್ಲಿ ನಾನು ಭಾಗವಹಿಸಿದ್ದು ತುಂಬಾ ಸಂತೋಷವಾಯಿತು, ನಾನು ಸಹ ವಿಶೇಷ ಪೂಜೆ ಸಲ್ಲಿಸಿ ಸಮಾಜಕ್ಕೆ ಒಳಿತಾಗಲಿ ಎಂದು ಪ್ರಾರ್ಥಿಸಿದ್ದೇನೆ ಎಂದು ಹೇಳಿದರು.

ನಾಯಕ ಸಮಾಜದ ತಾಲೂಕು ಅಧ್ಯಕ್ಷ ಬಿ.ಕಾಂತರಾಜ್ ಮಾತನಾಡಿ, ಬುಡಕಟ್ಟು ವೀರನಾದ ಗಾದ್ರಿಪಾಲನಾಯಕ ನಮ್ಮ ಆರಾಧ್ಯ ದೈವನಾಗಿದ್ದಾನೆ. ಆರು ದಿನಗಳ ಕಾಲ ನಡೆಯುವ ಜಾತ್ರೆ ಪ್ರತಿಯೊಂದು ದಿನವು ವಿಶೇಷವಾಗಿರುತ್ತದೆ. ಇಂದು ಮಿಂಚೇರಿ ಯಾತ್ರೆಯು ನಮ್ಮ ಚಿತ್ರದುರ್ಗದ ರಾಜಬೀದಿಗಳಲ್ಲಿ ಸಾಗಿದ್ದು, ನಮ್ಮ ಸಮಾಜದ ಶಾಸಕರಾದ ಟಿ.ರಘುಮೂರ್ತಿ ಅವರು ಮತ್ತು ನಮ್ಮ ಸಮಾಜದ ಮುಖಂಡರು ಪೂಜೆ ಸಲ್ಲಿಸಿ ಬರಮಾಡಿಕೊಂಡು ಮೆರವಣಿಗೆಯನ್ನು ಅದ್ದೂರಿಯಾಗಿ ಬಿಳ್ಕೊಟ್ಟೇವು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಮಾಜದ ಮುಖಂಡ ಅಂಜಿನಪ್ಪ, ಸೂರನಾಯಕ್, ಮದಕರಿ ವಿದ್ಯಾಸಂಸ್ಥೆಯ ಸಂದೀಪ್ ನಾಯಕ್, ಯೋಗೇಶ್ ಬಾಬು, ಅಹೋಬಲ ಟಿವಿಎಸ್ ಅರುಣ್ ಕುಮಾರ್, ಗೋಪಲಸ್ವಾಮಿನಾಯಕ್, ಕಾಟೀಹಳ್ಳಿ ಕರಿಯಪ್ಪ , ಸಾಗರ್, ವಿಜಯ್ ಕುಮಾರ್, ದರ್ಶನ್ ಇಂಗಳದಾಳ್, ಬಸವರಾಜ್ ಮತ್ತು ಮುಖಂಡರು ಮೆರವಣಿಗೆಯಲ್ಲಿ ಭಾಗವಹಿಸಿದ್ದರು.











## ಪ್ರಮುಖ ಸುದ್ದಿ

### ಅಶೋಕ ವಾಚನಾಲಯ ಮತ್ತು ಮನೋರಂಜನಾ ಕೇಂದ್ರದ ಶತಮಾನೋತ್ಸವ ಸಮಾರಂಭ

# ಜನರು ಬೆಂಬಲಗಳಿಸಿರುವ ಈ ಸಂಸ್ಥೆಗೆ ಹೆಚ್ಚಿನ ಶ್ರೇಯಸ್ಸು

» **ಹೊಸದುರ್ಗ**
ಒಂದು ಸಂಸ್ಥೆ ಜನರ ಮನಸ್ಸಿನಲ್ಲಿ ಉಳಿಯಬೇಕಾದರೆ, ಸಾರ್ವಜನಿಕ ಕ್ಷೇತ್ರದಲ್ಲಿ ತೊಡಗಿಸಿಕೊಳ್ಳಬೇಕು. ಜನರ ನಂಬಿಕೆ ಗೌರವ ಗಳಿಸಿದರೆ ಸಂಸ್ಥೆ ಹಲವು ವರ್ಷಗಳ ಕಾಲ ನಡೆಯುತ್ತದೆ ನೂರು ವರ್ಷಗಳ ಕಾಲ ತಾಲ್ಲೂಕು ಮಟ್ಟದಲ್ಲಿ ಒಂದು ಸಂಸ್ಥೆ ಉಳಿಸಿಕೊಂಡಿರುವುದು ಒಂದು ಸಾಧನೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಿ ಸುಧಾಕರ್ ಅಭಿಪ್ರಾಯ ಪಟ್ಟರು.

ಪಟ್ಟಣದ ಅಶೋಕ ರಂಗಮಂದಿರದಲ್ಲಿ ಸೋಮವಾರ ಆಯೋಜಿಸಿದ್ದ 'ಅಶೋಕ ವಾಚನಾಲಯ ಮತ್ತು ಮನೋರಂಜನಾ ಕೇಂದ್ರದ ಶತಮಾನೋತ್ಸವ ಸಮಾರಂಭ' ಉದ್ಘಾಟಿಸಿ ಮಾತನಾಡಿದರು.

ಸಂಸ್ಥೆಯೂ ಸುಸಜ್ಜಿತವಾಗಿ ನೂರು ವರ್ಷ ನಡೆಯಲು ಸದಸ್ಯರ ಸಹಕಾರ, ಸಿಬ್ಬಂದಿಗಳ ಪರಿಶ್ರಮದ ಜೊತೆಗೆ ಸಾಮಾಜಿಕ ಚಟುವಟಿಕೆಗಳಲ್ಲಿ, ಸೇವಾ ಕಾರ್ಯದಲ್ಲಿ ಭಾಗವಹಿಸುವುದಾಗಿದೆ. ಜನರು ಬೆಂಬಲಗಳಿಸಿರುವ ಈ ಸಂಸ್ಥೆಗೆ ಹೆಚ್ಚಿನ ಶ್ರೇಯಸ್ಸು ದೊರೆಯಲಿದೆ ಎಂದು ಹಾರೈಸಿದರು.



ಚಳ್ಳಕೆರೆ ಶಾಸಕ ಟಿ ರಘುಮೂರ್ತಿ ಮಾತನಾಡಿ ಕ್ಲಬ್ ಎಂದರೆ ಕೇವಲ ಜೂಜು (ಇಸ್ಪಿಟ್) ಆಡುವ ಕೇಂದ್ರ ಎಂಬ ಭಾವನೆ ಎಲ್ಲರಲ್ಲೂ ಇದೆ. ಆದರೆ ಹೊಸದುರ್ಗದ ಅಶೋಕ ವಾಚನಾಲಯ ಮತ್ತು ಮನೋರಂಜನಾ ಕೇಂದ್ರ ಇದರಿಂದ ಭಿನ್ನವಾಗಿದೆ. ಹಲವು ಸಾಮಾಜಿಕ ಕಾರ್ಯಗಳನ್ನು ಕೈಗೊಂಡಿದೆ. ಧಾರ್ಮಿಕ ಕಾರ್ಯಕ್ರಮಗಳ ಜೊತೆಗೆ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೂ ಹಲವು ದೇಣಿಗೆ ನೀಡಿದೆ. ಈ ಸಂಸ್ಥೆ 500 ವರ್ಷ ಪೂರೈಸಲಿ. ಹಿಂದುಳಿದ ತಾಲ್ಲೂಕುಗಳ ಪಟ್ಟಿಯಲ್ಲಿ ಹೊಸದುರ್ಗವಿತ್ತು. ಪ್ರಸ್ತುತ ಶಾಸಕ ಬಿ ಜಿ ಗೋವಿಂದಪ್ಪ ಅವರು ಶಾಶ್ವತ ಯೋಜನೆಗಳನ್ನು ರೂಪಿಸಿ ತಾಲ್ಲೂಕನ್ನು ಅಭಿವೃದ್ಧಿಯತ್ತ ಕೊಂಡೊಯ್ಯುತ್ತಿದ್ದಾರೆ ಎಂದು ಅಭಿಮಾನದ ಮಾತುಗಳನ್ನ ವ್ಯಕ್ತಪಡಿಸಿದರು.'

ಶಾಸಕ ಬಿ ಜಿ ಗೋವಿಂದಪ್ಪ ಮಾತನಾಡಿ ಹಲವು ಶಾಸಕರು, ರಾಜಕೀಯ ಮುತ್ಸದ್ದಿಗಳು, ನಾಯಕರು, ಸದಸ್ಯರು ಅಶೋಕ ವಾಚನಾಲಯದಲ್ಲಿ ಸ್ವಚ್ಛ ಆಡಳಿತ ನಡೆಸಿ, ಲೆಕ್ಕಪತ್ರಗಳನ್ನು ಕ್ರಮವಾಗಿ ನಿರ್ವಹಿಸಿ, ನಿಸ್ವಾರ್ಥದಿಂದ ಪ್ರಾಮಾಣಿಕವಾಗಿ ಆಡಳಿತ ನಡೆಸಿದ್ದಾರೆ. ಪ್ರಸ್ತುತ ಆಡಳಿತ ಮಂಡಳಿಯೂ ಕೂಡ ಅದೇ ಮಾರ್ಗದಲ್ಲಿ ನಡೆಯಬೇಕು. ನೂರು ವರ್ಷ ಪೂರೈಸಿರುವ ಸಂಸ್ಥೆಗಳು ಸಮಸ್ಯೆಗಳ ಸುಳಿಯಲ್ಲಿ ಸಿಲುಕದಂತೆ ಎಚ್ಚರವಹಿಸಿ ಎಂದು ಕಿವಿಮಾತು ಹೇಳಿದರು.

ಸಮಾರಂಭದಲ್ಲಿ ಮಾಜಿ ಶಾಸಕ ಟಿ.ಹೆಚ್.ಬಸವರಾಜ್ ಅಶೋಕ ವಾಚನಾಲಯ ಮತ್ತು ಮನೋರಂಜನಾ ಕೇಂದ್ರದ ಅಧ್ಯಕ್ಷ ಹೆಚ್.ಬಿ. ಮರಿಯಪ್ಪ, ಎಂ. ತಿಪ್ಪೇಸ್ವಾಮಿ ಹಲವರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T